ಸಂಪುಟ : 10 ಸಂಚಿಕೆ: 221 ಪುಟ : 4+2 ಬೆಲೆ: 3.00 ರವಿವಾರ ಅಕ್ಟೋಬರ್ 12 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 221 Pages : 4+2 Price : 3.00 Sunday October 12 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗಂಗಾಬಿಕೆಯವರ ಕುರಿತು ಉಪನ್ಯಾಸ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಅ. 12ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1667ನೇ ಶರಣ ಸಂಗಮದಲ್ಲಿ ಬಸವಣ್ಣನವರ ಆಚಾರ ಪತ್ನಿ ಗಂಗಾಬಿಕೆಯವರ ಕುರಿತು ಉಪನ್ಯಾಸ ಹಾಗೂ ಬಸವ ಸಂಸ್ಕೃತಿ ಅಭಿಯಾನ ಯಶಸ್ವಿಗೊಳಿಸಿದವರಿಗೆ ಅಭಿನಂದನಾ ನುಡಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣೆ ಗಿರಿಜಕ್ಕ ಧರ್ಮರಡ್ಡಿ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಾಬ್ದಿಯ ನಿಮಿತ್ತ ಅ.12ರಂದು ಮಧ್ಯಾಹ್ನ 2.45 ಗಂಟೆಗೆ ನಗರದ ವಿರೇಶ್ವರ ಲೈಬ್ರರಿ ಹತ್ತಿರದಿಂದ ಗಣವೇಷಧಾರಿ ಸ್ವಯಂಸೇವಕರ ಭವ್ಯ ಪಥ ಸಂಚಲನ ಕಾರ್ಯಕ್ರಮ ಜರುಗುವುದು. ಈ ಪಥಸಂಚಲನ ಗದಗ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ನಂತರ ಸಾಯಂಕಲ 5 ಗಂಟೆಗ ನಗರದ ಗದಗ-ಬೆಟಗೇರಿ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಸಾರ್ವಜನಿಕ ಸಮಾರಂಭ ಜರುಗುವುದು.

ಈ ಪಥಸಂಚಲನ ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯ ಸ್ವಯಂ ಸೇವಕರು, ಪದಾಧಿಕಾರಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಗದಗ-ಬೆಟಗೇರಿ ನಗರಸಭೆಯ ಸದಸ್ಯ ವಿನಾಯಕ ಮಾನ್ವಿ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

### ಸಿ.ಎಂ ಸಿದ್ದರಾಮಯ್ಯ ಕುರ್ಚಿ ಖಾಲಿಯಾಗುವುದಂತೂ ಗ್ಯಾರಂಟಿ; ಬಿ. ಶ್ರೀರಾಮುಲು ವ್ಯಂಗ್ಯ

# ನವೆಂಬರ್‌ನಲ್ಲಿ ಕ್ರಾಂತಿಯಾಗುವುದು ಖಚಿತ

■ವಿಜಯಸಾಕ್ಷಿ ಸುದ್ದಿ, ಗದಗ

ಜನವರಿಯಲ್ಲಿ ಸಂಕ್ರಾಂತಿ ಆಗುವುದೋ ಬಿಡುವುದೋ ಗೊತ್ತಿಲ್ಲ, ಆದರೆ, ನವೆಂಬರ್‌ನಲ್ಲಿ ಕ್ರಾಂತಿ ಆಗುವುದಂತೂ ನೂರಕ್ಕೆ ನೂರರಷ್ಟು ಖಚಿತ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ರಾಜಕಾರಣದಲ್ಲಿ ನವೆಂಬರ್ ತಿಂಗಳಲ್ಲಿ ದೊಡ್ಡ ಬದಲಾವಣೆಯಾಗಲಿದೆ. ಕಾಂಗ್ರೆಸ್ ನಾಯಕರು ಹೇಳುತ್ತಿರುವಂತೆ ನವೆಂಬರ್ ತಿಂಗಳಲ್ಲಿ ಕ್ರಾಂತಿ ಆಗಲಿದೆ. ಆದರೆ ನಮಗೆ ಗೊತ್ತಿಲ್ಲ. ನವೆಂಬರ್‌ನಲ್ಲಿ ಕ್ರಾಂತಿ ಆಗುವುದೋ, ಜನವರಿಯಲ್ಲಿ ಸಂಕ್ರಾಂತಿ ಬರುವುದೋ ಎಂದು ವ್ಯಂಗ್ಯವಾಡಿದರು.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುರ್ಚಿ ಖಾಲಿಯಾಗುವುದು ಗ್ಯಾರಂಟಿ.



ನಾನು ಬಹಳಷ್ಟು ಬಾರಿ ಕೇಳಿದಂತೆ ಮುಖ್ಯಮಂತ್ರಿಗಳು ನಮಗೆ ಕವಡೆ ಕಾಸಿನ ಕಿಮ್ಮತ್ತು ಕೊಡುವುದಿಲ್ಲ ಎಂದು ಅವರ ಪಕ್ಷದ ಶಾಸಕರೇ ಹೇಳುತ್ತಿದ್ದರು. ಯಾವುದೇ ಶಾಸಕರಿಗೆ ಗೌರವ ಕೊಡೋದಿಲ್ಲ, ಅನುದಾನ ಬಿಡುಗಡೆ ಮಾಡಿಲ್ಲ ಎಂದಿದ್ದನ್ನೂ ಕೇಳಿದ್ದೇನೆ. ಆದರೆ, ರಾಜಕಾರಣಿಗಳಿಗೆ ಜೀವನದಲ್ಲಿ ಗೌರವ ಬಹಳಷ್ಟು ಮುಖ್ಯವಾಗುತ್ತದೆ ಎಂದರು.

ಕಾಂಗ್ರೆಸ್‌ನ 130ಕ್ಕೂ ಹೆಚ್ಚು ಶಾಸಕರು ಹೇಳುತ್ತಿದ್ದಾರೆ. ಸಿದ್ದರಾಮಯ್ಯನವರಿಗೆ ಈಗ ಶಾಸಕರ ಮೇಲೆ ಇನ್ನಿಲ್ಲದ ಪ್ರೀತಿ ಬಂದಿದೆ. ನವೆಂಬರ್‌ನಲ್ಲಿ ಕ್ರಾಂತಿ ಆಗುತ್ತೆ ಎಂಬ ವಿಚಾರಕ್ಕಾಗಿಯೇ ಪ್ರೀತಿ ಬಂದಿದೆಯೋ ಗೊತ್ತಿಲ್ಲ, ಒಟ್ಟಿನಲ್ಲಿ ಪ್ರೀತಿ ಬಂದಿದೆ. ಔತಣಕೂಟಕ್ಕೆ ಬರಬೇಕೆಂದು ಸಿಎಂ ದಿಢೀರ್ ಆದೇಶ ಮಾಡಿದ್ದಾರೆ. 13ನೇ ತಾರೀಖಿನಿಂದ ಔತಣಕೂಟ ಆರಂಭವಾಗಲಿದೆ. ನವೆಂಬರ್‌ನಲ್ಲಿ ಅಧಿಕಾರ ಹಸ್ತಾಂತರ ಆಗಲಿದೆ ಎಂದು ಮಾಧ್ಯಮಗಳಲ್ಲಿ ಚರ್ಚೆ ಆಗುತ್ತಿದೆ ಎಂದರು.

ಸಿಎಂ ಕರೆದಿರುವ ಔತಣಕೂಟದಲ್ಲಿ ಎಲ್ಲಾ ಚರ್ಚೆ ಆಗೇ ಆಗುತ್ತವೆ. ಶಾಸಕರು-ಸಚಿವರು ಕಡ್ಡಾಯವಾಗಿ ಬರಬೇಕೆಂದು ತೀರ್ಮಾನ ತೆಗೆದುಕೊಂಡಿದ್ದಾರೆ. ನೂರಕ್ಕೆ ನೂರರಷ್ಟು ಕ್ರಾಂತಿ ಆಗಲಿದೆ ಎಂಬುದು ನಮ್ಮ ಬಿಜೆಪಿ ಪಕ್ಷದ ವಾದ. ಪುನಃ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರರನ್ನು ಮುಖ್ಯಮಂತ್ರಿ ಮಾಡಬೇಕೆಂಬ ಚರ್ಚೆಗಳು ನಡೆಯುತ್ತಿವೆ ಎಂದು ಶ್ರೀರಾಮುಲು ಹೇಳಿದರು.

ಈ ಸಂದರ್ಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮುಂತಾದವರು ಉಪಸ್ಥಿತರಿದ್ದರು.

### ಸಿಎಂ ಸಿದ್ದರಾಮಯ್ಯರಿಂದ ಬ್ಲ್ಯಾಕ್ ಮೇಲ್

ಔತಣಕೂಟಕ್ಕೆ ಯಾವುದೇ ಕ್ಯಾಬಿನೆಟ್‌ನ ಮಂತ್ರಿಗಳು ತಪ್ಪಿಸಬಾರದೆಂದು ಸಿಎಂ ಆದೇಶ ಮಾಡಿದ್ದಾರೆ. ಒಂದುವೇಳೆ ಸಚಿವ ಸಂಪುಟದಲ್ಲಿರುವ ಸಚಿವರು ಬರುವುದಿಲ್ಲ ಎಂದರೆ ಸಚಿವ ಸಂಪುಟದಿಂದಲೇ ನಿಮ್ಮನ್ನು ತೆಗೆದು ಹಾಕುತ್ತೇನೆಂದು ಸಿಎಂ ಬ್ಲಾಕ್‌ಮೇಲ್ ಮಾಡಿದ್ದಾರಂತೆ. ಸಿಎಮ್ ಬ್ಲಾಕ್‌ಮೇಲ್ ಮಾಡಿರುವುದರಿಂದಲೇ ಎಲ್ಲರೂ ಹೋಗುತ್ತಿರುವ ಬಗ್ಗೆ ಚರ್ಚೆ ಆಗುತ್ತಿದೆ. ಒಟ್ಟಾರೆ ನವೆಂಬರ್‌ನಲ್ಲಿ ಕ್ರಾಂತಿ ಆಗಲಿದೆ ಎಂದರು.


### ಕಾಂಗ್ರೆಸ್‌ನ ಆಂತರಿಕ ಗೊಂದಲದಿಂದ ರಾಜ್ಯದ ಆಡಳಿತ ಕುಂಠಿತ; ಬಸವರಾಜ ಬೊಮ್ಮಾಯಿ

# ಗ್ರೇಟರ್ ಬೆಂಗಳೂರು ಮಾಡಿದ್ದು ರಾಜಕೀಯ ಲಾಭಕ್ಕಾಗಿ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ರಾಜ್ಯ ಕಾಂಗ್ರೆಸ್‌ನಲ್ಲಿನ ಅಧಿಕಾರ ಹಂಚಿಕೆಯ ಆಂತರಿಕ ಗೊಂದಲದಿಂದ ರಾಜ್ಯದ ಆಡಳಿತ ಕುಂಠಿತವಾಗಿದ್ದು, ಕಾಂಗ್ರೆಸ್ ಹೈಕಮಾಂಡ್‌ಗೆ ಸ್ಪಷ್ಟತೆ ಇಲ್ಲದಿರುವುದರಿಂದ ರಾಜ್ಯದ ಜನರು ಸಂಕಷ್ಟ ಅನುಭವಿಸುವಂತಾಗಿದೆ ಎಂದು ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಪ್ರಮಾಣವಚನ ಸ್ವೀಕರಿಸಿದ ದಿನದಿಂದಲೂ ಅಧಿಕಾರ ಹಸ್ತಾಂತರ ವಿಚಾರ ಚಾಲ್ತಿಯಲ್ಲಿದೆ. ಸಿ.ಎಂ



ಕಡೆಯವರು ಅವರೇ 5 ವರ್ಷ ಮುಂದುವರೆಯುತ್ತಾರೆ ಎಂದರೆ, ಡಿ.ಕೆ. ಶಿವಕುಮಾರ್ ಕಡೆಯವರು ಡಿ.ಕೆ.ಶಿ ಸಿ.ಎಂ ಆಗುತ್ತಾರೆ ಎನ್ನುತ್ತಾರೆ. ಆದರೆ, ಹೈಕಮಾಂಡ್ ಇದರಲ್ಲಿ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳಲು ಆಗುತ್ತಿಲ್ಲ. ಅಲ್ಲಿಯೂ ಎರಡು ಗುಂಪುಗಳಾಗಿವೆ. ಇದು ಅವರ ಆತಂರಿಕ ಸಮಸ್ಯೆ. ಇವರ ಆತಂರಿಕ ಸಮಸ್ಯೆಯಿಂದ ರಾಜ್ಯದ ಆಡಳಿತ ಸ್ಥಗಿತವಾಗಿದೆ. ಮುಂದೆ ಏನಾಗುತ್ತೆ ಎಂಬ ಪ್ರಶ್ನೆಗೆ ಸಿಎಂ ಸಿದ್ದರಾಮಯ್ಯ ಅವರೇ ಉತ್ತರಿಸಬೇಕು ಎಂದರು.

ಶಾಸಕ ಕೆ.ಸಿ. ವಿರೇಂದ್ರ ಪಪ್ಪಿಯಿಂದ ಬಿಹಾರ ಚುನಾವಣೆಗೆ ಹಣ ವರ್ಗಾವಣೆ ಮಾಡುತ್ತಿದ್ದರು ಎಂಬ ಆರೋಪದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಇಡಿ ಸುದೀರ್ಘ ತನಿಖೆ ನಡೆಸುತ್ತಿದೆ. ಕೆ.ಸಿ. ವೀರೇಂದ್ರಗೆ ಈ ಹಣ ಎಲ್ಲಿಂದ ಬಂತು ಎಂದು ತನಿಖೆ ಮಾಡುತ್ತಿದೆ. ತನಿಖೆಯ ನಂತರ ಸತ್ಯಾಸತ್ಯತೆ ಹೊರಬರಲಿದೆ ಎಂದು ಹೇಳಿದರು.

### ರಾಜಕೀಯ ಲಾಭಕ್ಕೆ ಜಿಬಿಎ

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸಭೆಗೆ ಬಿಜೆಪಿ ನಾಯಕರು ಗೈರಾಗಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಬಸವರಾಜ ಬೊಮ್ಮಾಯಿ, ಗ್ರೇಟರ್ ಬೆಂಗಳೂರು ಮಾಡಿದ್ದು ರಾಜಕೀಯ ಲಾಭಕ್ಕಾಗಿ. ಕೆಲವು ಕ್ಷೇತ್ರಗಳನ್ನು ವಿಂಗಡನೆ ಮಾಡಿ, ಅದರಲ್ಲೂ ಬಿಜೆಪಿ ಪ್ರಬಲವಾಗಿರುವ ಕ್ಷೇತ್ರಗಳನ್ನು ಒಡೆದು, ಮೀಸಲಾತಿ ಲಾಭ ಪಡೆಯುವದಕ್ಕೆ ಗ್ರೇಟರ್ ಬೆಂಗಳೂರು ಮಾಡಿದ್ದಾರೆ. ಇದರಿಂದ ಅಧಿಕಾರಕ್ಕೆ ಬರುವ ಹುನ್ನಾರ ನಡೆಸಿದ್ದಾರೆ, ಇದರಿಂದ ಯಾವುದೇ ಅಭಿವೃದ್ಧಿ ಆಗುವುದಿಲ್ಲ ಎಂದರು.

ಅನ್ನಭಾಗ್ಯ ಯೋಜನೆಯಡಿ ಅಕ್ಕಿ ಬದಲು ಇಂದಿರಾ ಕಿಟ್ ಕೊಡುವುದಾಗಿ ಹೇಳಿರುವ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸಿಎಂ ಸಿದ್ದರಾಮಯ್ಯ ಅವರು ರಾಜ್ಯ ಸರ್ಕಾರದಿಂದ ಹತ್ತು ಕೆಜಿ ಅಕ್ಕಿ, ಕೇಂದ್ರದಿಂದ ಐದು ಕೆಜಿ ಅಕ್ಕಿ ಸೇರಿ ಹದಿನೈದು ಕೆಜಿ ಅಕ್ಕಿ ಕೊಡುವುದಾಗಿ ಹೇಳಿದ್ದರು. ಈಗ ಅವರ ಬಳಿ ಅಕ್ಕಿ ಕೊಡಲು ಹಣವಿಲ್ಲದಿರುವುದರಿಂದ ಈ ರೀತಿ ಮಾಡುತ್ತಿದ್ದಾರೆ ಎಂದು ಹೇಳಿದರು.

## ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಿ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರಿಗೆ ಕಾಂಗ್ರೆಸ್ ಸರಕಾರ ಸಚಿವ ಸ್ಥಾನ ನೀಡದಿದ್ದರೆ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಕಾಂಗ್ರೆಸ್ ಪಕ್ಷದ ಯುವ ಮುಖಂಡ ಅಭಿಷೇಕ ನವಲಗುಂದ ಹೇಳಿದರು.

ಅವರು ಶನಿವಾರ ಪಟ್ಟಣದ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ,

ಶಾಸಕ ಜಿ.ಎಸ್. ಪಾಟೀಲ ರಾಜ್ಯ ಕಂಡ ಅಪ್ರತಿಮ ನಾಯಕರು. ಕಾಂಗ್ರೆಸ್ ಪಕ್ಷದ ಬಲವರ್ಧನೆಗೆ ತಮ್ಮದೇ ಆದ ಕೊಡುಗೆಗಳನ್ನು ನೀಡಿರುವ ಮಹಾನ್ ವ್ಯಕ್ತಿ, ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದಾರೆ. ರಾಜ್ಯದಲ್ಲಿ ಎಲ್ಲ ಸಮುದಾಯಗಳನ್ನು




ಏಕತೆಯಿಂದ ಕಾಣುವ ಚೇತನ ಜಿ.ಎಸ್. ಪಾಟೀಲರಾಗಿದ್ದು, ಇವರಿಗೆ ಈ ಬಾರಿ ಸಚಿವ ಸ್ಥಾನ ನೀಡಬೇಕು. ಇದು ಬರಿ ರೋಣ ಮತಕ್ಷೇತ್ರದ ಕೂಗಲ್ಲ, ರಾಜ್ಯದ ಕೂಗಾಗಿದೆ ಎಂದರು.

ಕಳೆದ 50 ವರ್ಷಗಳಿಂದ ಶಾಸಕ ಜಿ.ಎಸ್. ಪಾಟೀಲ ಕುಟುಂಬದ ಎಲ್ಲ ಸದಸ್ಯರು ಕಾಂಗ್ರೆಸ್ ಪಕ್ಷದ ಕಟ್ಟಾಳುಗಳಂತೆ ವಿಶ್ವಾಸದಿಂದ ಪಕ್ಷವನ್ನು ಜಿಲ್ಲೆಯಲ್ಲಿ ಕಟ್ಟಿದ್ದಾರೆ. ಮುಖ್ಯವಾಗಿ ಜಿ.ಎಸ್. ಪಾಟೀಲರಿಗೆ ಪಕ್ಷದ ಹೈಕಮಾಂಡ್ ನೀಡಿದ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿಭಾಯಿಸಿದ್ದಾರೆ. ಇದು ಪಕ್ಷದ ವರಿಷ್ಠರಿಗೂ ತಿಳಿದಿರುವ ಸಂಗತಿ. ಪಕ್ಷದ ನಾಯಕರು ಶಾಸಕ ಜಿ.ಎಸ್. ಪಾಟೀಲರ ಪ್ರಾಮಾಣಿಕ ಸೇವೆಯನ್ನು ಗುರುತಿಸಿ ಅವರಿಗೆ ಈ ಬಾರಿ ಸಚಿವ ಸ್ಥಾನವನ್ನು ನೀಡಬೇಕು. ಇಲ್ಲದಿದ್ದರೆ ಸಾವಿರಾರು ಕಾರ್ಯಕರ್ತರು ಉಪವಾಸ ಸತ್ಯಾಗ್ರಹದೊಂದಿಗೆ ಉಗ್ರ ಹೋರಾಟ ನಡೆಸುತ್ತೇವೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮದುವೆಯಾಗಲು ನಿರಾಕರಿಸಿದ ಯುವತಿ ಕಿಡ್ನ್ಯಾಪ್: 12 ಗಂಟೆಗಳಲ್ಲಿ ಆರೋಪಿಗಳು ಅರೆಸ್ಟ್!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮದುವೆಗೆ ನಿರಾಕರಿಸಿದ ಯುವತಿಯೊಬ್ಬಳನ್ನು ಮಾರಕಾಸ್ತ್ರದೊಂದಿಗೆ ಮನೆ ಬಳಿ ಬಂದು ಅಪಹರಿಸಿದ್ದ ಪ್ರಕರಣವೊಂದು ಸುಬ್ರಮಣ್ಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೆಳಕಿಗೆ ಬಂದಿದೆ.

ಇಡೀ ಪ್ರಕರಣವನ್ನು ಕೇವಲ 12 ಗಂಟೆಗಳಲ್ಲಿ ಭೇದಿಸಿ, ಯುವತಿಯನ್ನು ರಕ್ಷಿಸಿರುವ ಪೊಲೀಸರ ಕಾರ್ಯಕ್ಕೆ ಶ್ಲಾಘನೆ ವ್ಯಕ್ತವಾಗಿದೆ. ಚಿಕ್ಕಲ್ಲಸಂದ್ರದಲ್ಲಿ ವಾಸವಿದ್ದ ಪ್ರಥಮ ವರ್ಷದ ಸಿಎ ವಿದ್ಯಾರ್ಥಿನಿಯೊಬ್ಬಳನ್ನು ಬುಧವಾರ ಕಿಡ್ನಾಪ್ ಮಾಡಲಾಗಿದೆ. ಮನೆಯಲ್ಲಿ ನಿಂತಿದ್ದಾಗ ಬೈಕ್ ಮತ್ತು ಆಟೋದಲ್ಲಿ ಬಂದ ಆರೋಪಿಗಳು, ಯುವತಿಯನ್ನು ಬಲವಂತವಾಗಿ ಎಳೆದುಕೊಂಡು ಹೋಗಿದ್ದಾರೆ.

ಈ ಕೃತ್ಯಕ್ಕೆ ಮುಂದಾದವರಲ್ಲಿ ಪ್ರಮುಖ ಆರೋಪಿಯಾಗಿ ರಂಗನಾಥ್ ಎಂಬಾತ ಗುರುತಿಸಲಾಗಿದ್ದು, ಈತ ಹಿಂದೆಯೇ ಯುವತಿಗೆ ಪರಿಚಿತ. ಬೈಕ್ ಮೆಕಾನಿಕ್ ಆಗಿ ಕೆಲಸಮಾಡುತ್ತಿದ್ದ ಈತ, ಕೊಲೆ ಕೇಸೊಂದರಲ್ಲಿ ಹಿಂದೆಯೇ ಜೈಲುಪಾಲನಾಗಿದ್ದ. ಜೈಲಿನಿಂದ ಬಿಡುಗಡೆಯಾದ ಬಳಿಕ, ಯುವತಿಯೊಂದಿಗೆ ಮದುವೆಯಾಗಲು ಪ್ರಯತ್ನಿಸಿದ ರಂಗ, ಯುವತಿ ಹಾಗೂ ಆಕೆಯ ಕುಟುಂಬದಿಂದ ನಿರಾಕರಣೆಯಾದ ಬಳಿಕ ಆಕ್ರೋಶಗೊಂಡಿದ್ದ.

ನಿರಾಕರಣೆ ಹಿನ್ನೆಲೆಯಲ್ಲಿ, ತನ್ನ ಸಹಚರರಾದ ರಾಜೇಶ್, ಚಂದನ್, ಶ್ರೇಯಶ್, ಮಂಜುನಾಥ್‌ರೊಂದಿಗೆ ಸೇರಿ ಯುವತಿಯನ್ನು ಕಿಡ್ನಾಪ್ ಮಾಡಿದ್ದಾನೆ. ಅಪಹರಣ ಪ್ರಕರಣ ದಾಖಲಾಗುತ್ತಿದ್ದಂತೆಯೇ ಸುಬ್ರಮಣ್ಯಪುರ ಠಾಣೆಯ ಇನ್ಸ್‌ಪೆಕ್ಟರ್ ರಾಜು ಎಂ.ಎಸ್ ನೇತೃತ್ವದಲ್ಲಿ ತೀವ್ರ ಕಾರ್ಯಾಚರಣೆ ಕೈಗೊಂಡ ಪೊಲೀಸರು, ಕೇವಲ 12 ಗಂಟೆಗಳಲ್ಲಿ ಯುವತಿಯನ್ನು ಇರಿಸಿಕೊಂಡಿದ್ದ ಸ್ಥಳವನ್ನು ಪತ್ತೆ ಹಚ್ಚಿ, ಆಕೆಯನ್ನು ಸುರಕ್ಷಿತವಾಗಿ ರಕ್ಷಿಸಿದ್ದಾರೆ.

ಇದರೊಂದಿಗೆ, ಐವರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಆರೋಪಿಗಳ ವಿರುದ್ಧ ಭಾರತೀಯ ದಂಡಸಂಹಿತೆಯ 363, 366 ಮತ್ತು ಇನ್ನಿತರೆ ಅನ್ವಯ ಪ್ರಕರಣ ದಾಖಲಿಸಲಾಗಿದೆ.

# ಹಂಪನಾ ಅವರು ಸಮಾಜದಲ್ಲಿ ಬದಲಾವಣೆ ಬಯಸುವ ಸಾಹಿತಿ: ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹಂಪನಾ ಅವರು ಕೇವಲ ಸಾಹಿತ್ಯ ರಚನೆಗಾಗಿ ಸಾಹಿತಿಯಾದವರಲ್ಲ. ಸಮಾಜದಲ್ಲಿ ಬದಲಾವಣೆ ಬಯಸುವ ಸಾಹಿತಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಣ್ಣಿಸಿದರು.

ಗಾಂಧಿ ಭವನದಲ್ಲಿ ನಡೆದ "ಹಂಪನಾ 90" ಸಾಹಿತ್ಯ ಅವಲೋಕನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಂಪನಾ ಅವರು ಸಮಾಜಮುಖಿ ಆಗುವ ಮೂಲಕ ತಮ್ಮ ಬದುಕನ್ನು ಸಾರ್ಥಕಗೊಳಿಸಿಕೊಂಡಿದ್ದಾರೆ. ಇವರು ಕನ್ನಡಿಗರ ಹೆಮ್ಮೆಯ ನಾಗರಾಜಯ್ಯ. ಇವರ ಸಾಹಿತ್ಯ ಮತ್ತು ಬದುಕಿಗೆ ನಾನು ಸಾಕ್ಷಿ ಆಗಿರುವುದು ನನ್ನ ಜೀವನದ ಸೌಭಾಗ್ಯ ಎಂದರು. ಇವರ ಬದುಕು ಮತ್ತು ಬರಹ ಹಾಗೂ ಸಾರ್ಥಕತೆ ಇಡೀ ಸಮಾಜಕ್ಕೆ ಮಾರ್ಗದರ್ಶನ ಎಂದರು.

ಸಾಹಿತ್ಯ ಕೃಷಿಯಲ್ಲಿ ಮಾತ್ರವಲ್ಲದೆ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರೂ ಆಗಿ ಕನ್ನಡ ಕಟ್ಟುವ ಕೆಲಸ ಮಾಡಿದ್ದಾರೆ. ಇವರ ಕೆಲಸ ಕನ್ನಡ ಜಗತ್ತಿಗೆ ತಲುಪಿರುವುದು ಅತ್ಯಂತ ಮಹತ್ವದ ಸಂಗತಿ ಎಂದರು.

ಭಾಷಾ ಶಾಸ್ತ್ರ, ಸಂಶೋಧನೆ, ಮಕ್ಕಳ ಸಾಹಿತ್ಯ, ವಿಮರ್ಶೆ ಸೇರಿ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲಿ ಬೆರಗು ಮೂಡಿಸುವ ಕೆಲಸ ಮಾಡಿದ್ದಾರೆ.




ಹಂಪನಾ ಅವರು ಒಳ್ಳೆ ವಾಗ್ಮಿ, ಸಮಾಜಕ್ಕೆ ಇವರಿಂದ ಬಹಳ ಉಪಕಾರ ಆಗುತ್ತದೆ. ಅಧ್ಯಾಪಕರೂ ಆಗಿ, ಕನ್ನಡ ಅಧ್ಯಯನ ಕೇಂದ್ರದ ನಿರ್ದೇಶಕರೂ ಆಗಿದ್ದರು. ನಾನು ಸಾಹಿತ್ಯದ ವಿದ್ಯಾರ್ಥಿ ಅಲ್ಲ. ಆದರೂ ಸಾಹಿತ್ಯ ವಲಯದ ಒಡನಾಟ ಹೆಚ್ಚಾಗಿದ್ದು ನಾನು ಹಂಪನಾ ಅವರ ಅಭಿಮಾನಿ ಎಂದರು.

ಹಂಪನಾ ಅವರು ಇನ್ನೂ ನೂರು ಕಾಲ ಆರೋಗ್ಯವಂತರಾಗಿ ಬದುಕಲಿ ಎಂದು ಹಾರೈಸಿದರು.

ಕಮಲಾ ಮತ್ತು ಹಂಪನಾ ಅವರು ಅದ್ಭುತ ದಂಪತಿ. ಇಬ್ಬರೂ ಸಾಹಿತ್ಯ ಕೃಷಿಯಲ್ಲಿ ಸಾಧನೆ ಮಾಡಿದವರು. ಇಬ್ಬರೂ ಕನ್ನಡ ಸಾಂಸ್ಕೃತಿಕ ಲೋಕಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

## ಸಂಪಾದಕೀಯ

# ಕನ್ನಡಿಗರಿಗೆ ಉದ್ಯೋಗ ಮೀಸಲಾತಿ: ಒಂದು ಸಮಗ್ರ ದೃಷ್ಟಿಯ ಹೆಜ್ಜೆ

ಕನ್ನಡಪರ ಸಂಘಟನೆಗಳ ದಶಕಗಳ ಬೇಡಿಕೆ ಹಾಗೂ 'ಸರೋಜಿನಿ ಮಹಿಷಿ ವರದಿ' ಜಾರಿಯ ಕೂಗು ಮತ್ತೆ ಮುನ್ನಲೆಗೆ ಬಂದಿದೆ. ಇದಕ್ಕೆ ಸ್ಪಂದಿಸಿರುವ ರಾಜ್ಯ ಸರ್ಕಾರವು, ಖಾಸಗಿ ವಲಯದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಮೀಸಲಾತಿ ಕಲ್ಪಿಸುವ ನಿಟ್ಟಿನಲ್ಲಿ ಗಂಭೀರ ಹೆಜ್ಜೆ ಇಟ್ಟಿರುವುದು ಸ್ವಾಗತಾರ್ಹ ಬೆಳವಣಿಗೆ.

ಕಳೆದ ವರ್ಷ 'ಸ್ಥಳೀಯ ಅಭ್ಯರ್ಥಿಗಳ ಉದ್ಯೋಗ ಮಸೂದೆ–2024' ಅನ್ನು ಐಟಿ–ಬಿಟಿ ವಲಯದ ವಿರೋಧದ ಕಾರಣಕ್ಕೆ ತಡೆಹಿಡಿದಿದ್ದ ಸರ್ಕಾರ, ಈಗ ತಳಮಟ್ಟದಿಂದಲೇ ಮಾಹಿತಿ ಸಂಗ್ರಹಿಸಲು ಮುಂದಾಗಿರುವುದು ದೂರದೃಷ್ಟಿಯ ಕ್ರಮ.

ಕಾರ್ಮಿಕ ಇಲಾಖೆಯು ರಾಜ್ಯದ ಕಾರ್ಖಾನೆಗಳಲ್ಲಿರುವ ಒಟ್ಟು ಉದ್ಯೋಗಿಗಳು ಮತ್ತು ಕನ್ನಡಿಗರ ಪ್ರಮಾಣದಂತಹ ಜಿಲ್ಲಾವಾರು ಅಂಕಿ–ಅಂಶಗಳನ್ನು ಕಲೆಹಾಕುತ್ತಿದೆ. ಈ ಮಾಹಿತಿಯು ವಾಸ್ತವ ಸ್ಥಿತಿಯ ಕನ್ನಡಿಯಾಗಲಿದ್ದು, ಮಸೂದೆಯ ಅವಶ್ಯಕತೆ ಮತ್ತು ಸಾಧಕ–ಬಾಧಕಗಳ ಕುರಿತು ವಸ್ತುನಿಷ್ಠ ಚರ್ಚೆಗೆ ಬುನಾದಿ ಹಾಕಲಿದೆ.

ಕೇವಲ ಒಂದು ಭಾವನಾತ್ಮಕ ನಿರ್ಧಾರದ ಬದಲಿಗೆ, ದತ್ತಾಂಶ–ಆಧಾರಿತ ನೀತಿಯನ್ನು ರೂಪಿಸಲು ಸರ್ಕಾರ ಯತ್ನಿಸುತ್ತಿರುವುದು ಶ್ಲಾಘನೀಯ. ಆದರೆ, ಇಲ್ಲಿ ಸೂಕ್ಷ್ಮ ಸಮತೋಲನ ಕಾಯ್ದುಕೊಳ್ಳುವುದು ಅತ್ಯಗತ್ಯ. ಕನ್ನಡಿಗರ ಉದ್ಯೋಗ ಹಕ್ಕನ್ನು ಖಚಿತಪಡಿಸುವುದರ ಜೊತೆಗೆ, ರಾಜ್ಯದ ಕೈಗಾರಿಕಾ ಪ್ರಗತಿ ಮತ್ತು ಹೂಡಿಕೆದಾರರ ವಿಶ್ವಾಸಕ್ಕೆ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು.

ವಿಶೇಷವಾಗಿ, ಜಾಗತಿಕ ಸ್ಪರ್ಧೆಯಲ್ಲಿರುವ ಐಟಿ–ಬಿಟಿ ಕ್ಷೇತ್ರದ ಆತಂಕಗಳನ್ನು ಪರಿಗಣಿಸಬೇಕು. ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿರುವಂತೆ, ಕಾನೂನಾತ್ಮಕವಾಗಿ ಯಾವುದೇ ತೊಡಕು ಆಗದಂತೆ ಅಂತಿಮ ನಿರ್ಧಾರ ಕೈಗೊಳ್ಳಬೇಕು. ಹೊರಗಿನ ಬಂಡವಾಳವನ್ನೂ ಆಕರ್ಷಿಸಿ, ರಾಜ್ಯದ ಆರ್ಥಿಕತೆಯನ್ನು ಬಲಪಡಿಸುತ್ತಲೇ, ಇಲ್ಲಿನ ಭೂಮಿಪುತ್ರರಿಗೆ ನ್ಯಾಯಯುತ ಪಾಲು ದೊರೆಯುವಂತಾಗಬೇಕು. ಸಮಗ್ರ ಸಮಾಲೋಚನೆ ಮೂಲಕ ಈ ನಿಟ್ಟಿನಲ್ಲಿ ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳಲಿ.

### ಹಮ ಕರಗುವಿಕೆಯ ಹಿಂದೆ ಎಚ್ಚರಿಕೆಯ ಘಂಟೆಯೂ ಬಾರಿಸಿತ್ತು

# ಯುವಕನೊಬ್ಬನ ಹಿಮಸಮಾಧಿ ರಹಸ್ಯ

ಜುಲೈ 2025. ಪಾಕಿಸ್ತಾನದ ಕೊಹಿಸ್ತಾನ್ ಪ್ರದೇಶದ ಹಿಮಾಚ್ಛಾದಿತ ಪರ್ವತಶ್ರೇಣಿಗಳ ನಡುವೆ ನಡೆಯುತ್ತಿದ್ದ ಉಮರ್ ಖಾನ್ ಎಂಬಾತ ತನ್ನ ಮೇಕೆಗಳನ್ನು ಹುಡುಕುತ್ತಾ ಲೇಡಿ ಮೀಡೋಸ್ ಹಿಮನದಿಯ ತುದಿಯವರೆಗೆ ಸಾಗಿದ್ದ. ಆದರೆ, ಅಲ್ಲಿ ಕಂಡ ದೃಶ್ಯ ಅವನ ಜೀವಮಾನದಲ್ಲಿಯೇ ಮರೆಯಲಾಗದ ಘಟನೆಯಾಯಿತು. ಹಿಮದೊಳಗೆ ಅರ್ಧ ಮುಚ್ಚಿಕೊಂಡಿದ್ದ ಒಂದು ದೇಹ. ಬಟ್ಟೆ, ಚಪ್ಪಲಿ, ಮುಖದ ಆಕಾರ, ಎಲ್ಲವೂ ಅಸ್ಪಷ್ಟವಾಗಿ ಕಾಣಿಸುತ್ತಿತ್ತು. ಇನ್ನೂ ಹತ್ತಿರ ಸಾಗುತ್ತಿದ್ದಂತೆ ಕ್ರಮೇಣ ಸ್ಪಷ್ಟವಾಗತೊಡಗಿತು. ಉಮರ್ ಖಾನ್ ಬೆಚ್ಚಿಬಿದ್ದಿದ್ದ. ಶವ! ಅದು ಶತಮಾನಗಳಷ್ಟು ಹಳೆಯ ಮಮ್ಮಿ ಅಲ್ಲ, ನಿನ್ನೆ ರಾತ್ರಿಯಷ್ಟೇ ಆ ಹಿಮಗಡ್ಡೆಯಲ್ಲಿ ಯಾರೋ ಮಲಗಿದ್ದಾರೇನೋ ಎಂಬಂತಿತ್ತು ಆ ದೃಶ್ಯ.



ಇನ್ನೂ ಹತ್ತಿರ ಹೋಗಿ ನೋಡಿದಾಗ, ಆ ಮೃತದೇಹದ ಶರ್ಟಿನ ಪಾಕೆಟ್‌ನ ಆಚೆ ಗುರುತಿನ ಚೀಟಿಯೊಂದು ಇಣುಕುತ್ತಿತ್ತು. ನಸೀರುದ್ದೀನ್! 1997ರಲ್ಲಿ ಕಣ್ಮರೆಯಾಗಿದ್ದ ವ್ಯಕ್ತಿಯೇ ಈತ! ಅವನ ಕುಟುಂಬವು 28 ವರ್ಷಗಳಿಂದ ಅವನ ಕುರಿತು ಯಾವುದೇ ಸುಳಿವೂ ಪಡೆಯದೆ ಬದುಕಿತ್ತು. ಇದೀಗ ಹಿಮ ಕರಗಿದಂತೆ, ಕಾಲ ತನ್ನ ಮೌನವನ್ನು ಮುರಿದಿತ್ತು.

1997ರ ಜೂನ್ ತಿಂಗಳು. ಕೊಹಿಸ್ತಾನದ ಪರ್ವತಗಳಲ್ಲಿ ಭಾರಿ ಹಿಮಪಾತದ ಸಮಯ. ನಸೀರುದ್ದೀನ್ ತನ್ನ ಸಹೋದರನೊಂದಿಗೆ ಪ್ರಯಾಣಿಸುತ್ತಿದ್ದಾಗ ಹಿಮದ ಬಿರುಗಾಳಿ ಅವರನ್ನು ಸುಸ್ತು ಮಾಡಿತ್ತು. ಕೆಲವು ನಿಮಿಷಗಳಲ್ಲಿ ಎದುರು ಏನಿದೆ ಎಂಬುದೂ ಕಾಣದಷ್ಟು ಹಿಮ ಆವರಿಸುತ್ತಿತ್ತು. ಹಿಮದ ಗಡ್ಡೆಯ ಒಂದು ಚಿಕ್ಕ ಸೀಳಿನ ಬಾಯಲ್ಲಿ ಕಾಲುಜಾರಿ ಬಿದ್ದುಬಿಟ್ಟಿದ್ದ ನಸೀರುದ್ದೀನ್. ಮುಂದೇನು? ಕ್ರಮೇಣ ಹಿಮದೊಳಗೇ ಒಂದಾಗಿ ಸಂಪೂರ್ಣ ಕಣ್ಮರೆಯಾಗಿಬಿಟ್ಟ. ಆ ಸಮಯದಲ್ಲಿ ಎಷ್ಟೇ ಹುಡುಕಾಟ ನಡೆದರೂ ನಸೀರುದ್ದೀನ್ ಬಗ್ಗೆ ಯಾವುದೇ ಸುಳಿವು ದೊರೆತಿರಲಿಲ್ಲ. ಕುಟುಂಬವು ನಿಧಾನವಾಗಿ ಆಶೆ ಬಿಟ್ಟುಬಿಟ್ಟಿತ್ತು.

ಆದರೆ, ಅವನ ದೇಹ ಹೀಗೆ ನಿನ್ನೆ–ಮೊನ್ನೆಯಷ್ಟೇ ಹಿಮದೊಳಗೆ ಸೇರಿಕೊಂಡಿದ್ದಾನೇನೋ ಎಂಬಷ್ಟು ಹಸಿಯಾಗಿತ್ತು. ಹಿಮನದಿಯೊಳಗಿನ ಪರಿಸರವು ಶೀತ (ಸಾಮಾನ್ಯವಾಗಿ –20 ಡಿಗ್ರಿಗಿಂತಲೂ ಕಡಿಮೆ), ಅತ್ಯಲ್ಪ ತೇವಾಂಶ ಮತ್ತು ಕಡಿಮೆ ಆಮ್ಲಜನಕದ ಪ್ರಮಾಣವನ್ನು ಹೊಂದಿರುತ್ತದೆ. ಈ ಪರಿಸರದಲ್ಲಿ ಬ್ಯಾಕ್ಟೀರಿಯಾ ಹಾಗೂ ಕಳಿಯುವಿಕೆಯ ಪ್ರಕ್ರಿಯೆ ಸಂಪೂರ್ಣ ನಿಲ್ಲುತ್ತವೆ. ಅಂದರೆ ದೇಹದ ಒಳಗಿನ ನೈಸರ್ಗಿಕ ಹ್ಯುಮಿಡಿಟಿ (ತೇವಾಂಶ) ಸಣ್ಣ ಹಿಮದ ಕಣಗಳಾಗಿ ಬದಲಾಗುತ್ತದೆ ಮತ್ತು ಪ್ರೋಟೀನ್‌ಗಳು ಹಾಳಾಗದಂತೆ ಉಳಿಯುತ್ತವೆ.

ಇದನ್ನೇ ಕ್ರಿಯೋಮಮ್ಮಿಫಿಕೇಶನ್ ಎಂದು ಕರೆಯಲಾಗುತ್ತದೆ. ಇದು ಶೀತದ ಪ್ರಭಾವದಿಂದ ಸ್ವಾಭಾವಿಕವಾಗಿ ನಡೆಯುವ ಮಮ್ಮಿಫಿಕೇಶನ್ ಕ್ರಿಯೆ. ಹೀಗಾಗಿ ಅವನ ದೇಹ 28 ವರ್ಷಗಳ ಕಾಲ ಹಿಮದೊಳಗೆ ಹಾಗೆಯೇ ಉಳಿಯಿತು. ಲೇಡಿ ಮೀಡೋಸ್ ಹಿಮನದಿ ಕಳೆದ ದಶಕಗಳಲ್ಲಿ ಗಮನಾರ್ಹವಾಗಿ ಬದಲಾಗುತ್ತಿದೆ. ಜಾಗತಿಕ ಹವಾಮಾನ ಬದಲಾವಣೆಯಿಂದ ಹಿಮನದಿಗಳು ಕರಗುತ್ತಿದ್ದು, ಪಾಕಿಸ್ತಾನ ಮತ್ತು ಭಾರತ ಎರಡೂ ದೇಶಗಳಲ್ಲಿ ನೂರಾರು ಹಿಮನದಿಗಳ ಉದ್ದ, ಅಗಲ, ಮತ್ತು ಹಿಮದ ಗಾತ್ರವು ವರ್ಷದಿಂದ ವರ್ಷಕ್ಕೆ ಕುಸಿಯುತ್ತಿದೆ. ಈ ಹಿಮ ಕರಗುವಿಕೆಯಿಂದ ಅನೇಕ ಹಳೆಯ ಅವಶೇಷಗಳು ಹೊರಬರುತ್ತಿವೆ. ಕೆಲವೊಮ್ಮೆ ಕಾಡು ಪ್ರಾಣಿಗಳ ದೇಹ, ನಾಪತ್ತೆಯಾಗಿದ್ದ ಪರ್ವತಾರೋಹಿಗಳ ಅವಶೇಷಗಳು ಹೊರಬರತೊಡಗಿವೆ.

ಸ್ಥಳೀಯ ಆಡಳಿತವು ನಸೀರುದ್ದೀನ್‌ನ ದೇಹವನ್ನು ಹೊರತೆಗೆದು ವೈದ್ಯಕೀಯ ಮತ್ತು ಫಾರೆನ್ಸಿಕ್ ಪರೀಕ್ಷೆಗೆ ಕಳುಹಿಸಿತು. ಅವನ ಗುರುತು ದೃಢವಾಗಿತ್ತು. ವಿಜ್ಞಾನಿಗಳು ಇದನ್ನು ಬೇರೆಯದೇ ರೀತಿಯಲ್ಲಿ ವಿಶ್ಲೇಷಿಸುತ್ತಾರೆ. ಕರಗುವ ಪ್ರತಿಯೊಂದು ಹಿಮನದಿ, ಒಂದು ಇತಿಹಾಸದ ಪುಟವನ್ನು ತೆರೆದಿಡುತ್ತಿದೆ! ಪ್ರಕೃತಿ ಮತ್ತು ಕಾಲವು ಒಟ್ಟಾಗಿ ಬರೆಯುವ ಕಥೆಗಳು ಅಸಾಧಾರಣ. ಹಿಮದೊಳಗಿನ ದೇಹಗಳು ಕೇವಲ ಮಾನವ ದುರಂತವನ್ನಷ್ಟೇ ಹೇಳುತ್ತಿಲ್ಲ, ಅವು ಪ್ರಪಂಚದ ಹವಾಮಾನ ಇತಿಹಾಸದ ಪುರಾವೆಗಳೂ ಆಗಿವೆ.

ಇಟಲಿಯ ಆಲ್ಪ್ಸ್‌ನಲ್ಲಿ ಪತ್ತೆಯಾದ 5,300 ವರ್ಷ ಹಳೆಯ ಮಮ್ಮಿ ಕೂಡ ಇದೇ ರೀತಿಯಾಗಿ ಹಿಮನದಿಯೊಳಗೆ ಸಂರಕ್ಷಿತವಾಗಿತ್ತು. ಇತ್ತೀಚೆಗೆ ನೇಪಾಳ ಮತ್ತು ಚೀನಾದ ಹಿಮನದಿಗಳಲ್ಲಿಯೂ ಇದೇ ರೀತಿಯ ಹಳೆಯ ಮಾನವ ಅವಶೇಷಗಳು ಪತ್ತೆಯಾಗಿವೆ. ನಸೀರುದ್ದೀನ್ ಪ್ರಕರಣ ಈ ಸಾಲಿಗೆ ಹೊಸ ಅಧ್ಯಾಯವನ್ನು ಸೇರಿಸಿದೆ. ಅದು ಮಾನವೀಯ ಭಾವನೆಗಳ ಕಥೆಯಷ್ಟೇ ಅಲ್ಲ. ಪ್ರಕೃತಿಯ ನಿಶ್ಚಲತೆಯ ಕಥೆಯೂ ಹೌದು. ಹಿಮನದಿಗಳ ಕರಗುವಿಕೆ ಕೇವಲ ಹಳೆಯ ರಹಸ್ಯಗಳನ್ನು ಹೊರತರುತ್ತಿಲ್ಲ. ಅದು ಭವಿಷ್ಯದ ಆತಂಕಗಳನ್ನೂ ಎದುರಿಡುತ್ತಿದೆ. ಏಷ್ಯಾದ ಹಿಮನದಿಗಳು, ಥರ್ಡ್ ಪೋಲ್ ಎಂದೇ ಕರೆಯಲ್ಪಡುವ ಹಿಮಾಲಯ ಶ್ರೇಣಿಗಳು ಲಕ್ಷಾಂತರ ಜನರ ನೀರಿನ ಮೂಲವಾಗಿದೆ. ಇವು ಕರಗಿದರೆ, ನದಿಗಳ ಹರಿವು, ಕೃಷಿ ಮತ್ತು ಪರಿಸರ ಸಮತೋಲನಗಳ ಮೇಲೆ ಪ್ರಭಾವ ಬೀರುತ್ತದೆ.

ಜಾಗತಿಕ ತಾಪಮಾನದಲ್ಲಿ ಕೇವಲ 1 ಡಿಗ್ರೀ ಏರಿಕೆಯೂ ಹಿಮನದಿಗಳ ಕರಗುವಿಕೆಯನ್ನು ಶೇ.30ರವರೆಗೆ ವೇಗಗೊಳಿಸಬಲ್ಲದು ಎಂದು World Glacier Monitoring Service ಎಚ್ಚರಿಸಿದೆ. ಹೀಗೆ 28 ವರ್ಷಗಳ ನಂತರ, ಒಂದು ಕುಟುಂಬದ ನೋವು ಹಿಮದ ಕರಗುವಿಕೆಯೊಂದಿಗೆ ಲೀನವಾಗಿತ್ತು. ಆದರೆ ಪ್ರಪಂಚಕ್ಕೆ ಅದು ಹವಾಮಾನ ಬದಲಾವಣೆಯ ಕಠಿಣ ಎಚ್ಚರಿಕೆಯನ್ನೂ ನೀಡಿತು.

– ಅಲೆಮಾರಿ.

## ಗಾಂಧಿ ಕುರಿತು ನಿಂದನಾತ್ಮಕ ಹೇಳಿಕೆ; ಸಾಮಾಜಿಕ ಜಾಲತಾಣದಲ್ಲಿ ತೆಲುಗು ನಟನ ವಿರುದ್ಧ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ಟಾಲಿವುಡ್ ನಟ ಶ್ರೀಕಾಂತ್ ಅಯ್ಯಂಗಾರ್ ಅವರು ಮಹಾತ್ಮ ಗಾಂಧಿಯವರ ಬಗ್ಗೆ ಅವಹೇಳನಕಾರಿ ಹೇಳಿಕೆಗಳನ್ನು ನೀಡಿರುವ ವೀಡಿಯೊ ವೈರಲ್ ಆದ ನಂತರ ವಿವಾದಕ್ಕೆ ಕಾರಣವಾಗಿದೆ. ವೈರಲ್ ಆಗಿರುವ ಕ್ಲಿಪ್‌ನಲ್ಲಿ, "ಗಾಂಧಿಯನ್ನು ರಾಷ್ಟ್ರಪಿತ ಎಂದು ಕರೆಯುವುದು ಎಲ್ಲರಿಗೂ ಮಾಡುವ ಅವಮಾನ" ಎಂದು ಅವರು ಹೇಳಿದ್ದಾರೆ.

ಆನ್‌ಲೈನ್‌ನಲ್ಲಿ ವ್ಯಾಪಕವಾಗಿ ವೈರಲ್ ಆದ ಅವರ ಹೇಳಿಕೆಗಳು ರಾಜಕೀಯ ನಾಯಕರು, ನಾಗರಿಕ ಸಮಾಜ ಗುಂಪುಗಳು ಮತ್ತು ಗಾಂಧಿ ಅನುಯಾಯಿಗಳಿಂದ ತೀವ್ರ ಟೀಕೆಗೆ ಗುರಿಯಾಗಿವೆ.

## ಕದನ ವಿರಾಮ। ಮನೆಗೆ ಮರಳುತ್ತಿರುವ ಗಾಝಾ ಜನತೆ; ಅವಶೇಷಗಳಡಿ ತಮ್ಮವರಿಗಾಗಿ ಹುಡುಕಾಟ

■ ವಿಜಯಸಾಕ್ಷಿ ಸುದ್ದಿ, ಗಾಝಾ

ಕದನ ವಿರಾಮದ ಹಿನ್ನೆಲೆ, ಇಸ್ರೇಲ್ ಗಾಝಾ ಮೇಲಿನ ಬಾಂಬ್ ದಾಳಿಯನ್ನು ನಿಲ್ಲಿಸಿದ್ದು, ಒತ್ತಾಯಪೂರ್ವಕವಾಗಿ ಸ್ಥಳಾಂತರಿಸಲ್ಪಟ್ಟಿದ್ದ ಸಾವಿರಾರು ಪ್ಯಾಲೆಸ್ತೀನಿಯರು ತಮ್ಮ ಊರುಗಳಿಗೆ ಮರಳುತ್ತಿದ್ದಾರೆ.

ಪ್ರಮುಖವಾಗಿ ಉತ್ತರ ಗಾಝಾದತ್ತ ಜನರು ಆಗಮಿಸುತ್ತಿದ್ದಾರೆ. ಈ ಪ್ರದೇಶದಲ್ಲಿ ಇಸ್ರೇಲ್ ಆಕ್ರಮಣಕ್ಕೂ ಮುನ್ನ ಹೆಚ್ಚಿನ ಸಂಖ್ಯೆಯ ಜನರು ವಾಸಿಸುತ್ತಿದ್ದರು. ಬಾಂಬ್ ದಾಳಿ ನಡೆಸಿ ಇಸ್ರೇಲಿ ಸೇನೆ ಅವರಲ್ಲಿ ಹಲವರನ್ನು ಸುಖಾಸುಮ್ಮನೆ ಹತ್ಯೆಗೈದಿದೆ. ಇನ್ನುಳಿದವರು ತಮ್ಮದೆಲ್ಲವನ್ನು ಬಿಟ್ಟು ಬೇರೆಡೆಗೆ ತೆರಳಿದ್ದರು.

ಕಳೆದ ತಿಂಗಳು ಇಸ್ರೇಲ್ ಸೇನೆ ಗಾಝಾ ಪಟ್ಟಿಯ ಗಾಝಾ ನಗರದಲ್ಲಿ ನೆಲದ ದಾಳಿಯನ್ನು ತೀವ್ರಗೊಳಿಸಿದಾಗ ಸಮುದ್ರ ತೀರದ ಅಲ್– ರಶೀದ್ ರಸ್ತೆಯ ಮೂಲಕ ಸಾವಿರಾರು ಅಮಾಯಕ, ಅಸಹಾಯ, ಜನರು ಪಲಾಯನ ಮಾಡಿದ್ದ ಫೋಟೋ, ವಿಡಿಯೋಗಳನ್ನು ಮಾಧ್ಯಮಗಳು ಪ್ರಕಟಿಸಿತ್ತು. ಇದೀಗ ಅದೇ ರಸ್ತೆಯ ಮೂಲಕ ಜನರು ಹಿಂದಿರುಗುವ ದೃಶ್ಯಗಳನ್ನು ತೋರಿಸುತ್ತಿವೆ.

## ಐಎಸ್‌ಐ ಪರವಾಗಿ ಬೇಹುಗಾರಿಕೆ: ರಾಜಸ್ಥಾನದ ಗೋವಿಂದಗಢ ನಿವಾಸಿ ಮಂಗತ್ ಸಿಂಗ್ ಬಂಧನ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪಾಕಿಸ್ತಾನದ ಐಎಸ್‌ಐ (ಇಂಟರ್–ಸರ್ವಿಸಸ್ ಇಂಟೆಲಿಜೆನ್ಸ್) ಪರವಾಗಿ ಬೇಹುಗಾರಿಕೆ ನಡೆಸುತ್ತಿದ್ದ ಆರೋಪದ ಮೇಲೆ ರಾಜಸ್ಥಾನ ಗುಪ್ತಚರ ಇಲಾಖೆಯು ಅಲ್ವಾರ್‌ನ ಗೋವಿಂದಗಢ ನಿವಾಸಿ 32 ವರ್ಷದ ಮಂಗತ್ ಸಿಂಗ್ ಅವರನ್ನು ಬಂಧಿಸಿದೆ. ರಾಜಸ್ಥಾನ ಪೊಲೀಸರ ಸಿಐಡಿ ಗುಪ್ತಚರ ಇಲಾಖೆ ನಡೆಸಿದ ವಿವರವಾದ ತನಿಖೆಯ ನಂತರ, 1923 ರ ಅಧಿಕೃತ ರಹಸ್ಯ ಕಾಯ್ದೆಯಡಿಯಲ್ಲಿ ಈ ಬಂಧನವನ್ನು ಮಾಡಲಾಗಿದೆ.



ಅಲ್ವಾರ್‌ನ ಕಂಟೋನ್ಮೆಂಟ್ ಪ್ರದೇಶದ ಕಣ್ಗಾವಲು ಸಮಯದಲ್ಲಿ ಮಂಗತ್ ಸಿಂಗ್ ಅವರ ಚಟುವಟಿಕೆಗಳನ್ನು ಮೊದಲು ಗುರುತಿಸಲಾಯಿತು. ಸ್ವಲ್ಪ ದಿನಗಳ ಬಳಿಕ ಸಿಂಗ್ ಅನುಮಾನಾಸ್ಪದ ಕೃತ್ಯಗಳಲ್ಲಿ ತೊಡಗಿದ್ದಾರೆ ಎಂದು ಅಧಿಕಾರಿಗಳು ಗಮನಿಸಿದರು, ಇದರಿಂದಾಗಿ ಆತನ ಮೇಲೆ ನಿಕಟ ಮೇಲ್ವಿಚಾರಣೆಗೆ ಒಳಪಡಿಸಿದರು. ಪೊಲೀಸರ ಪ್ರಕಾರ, ಸಿಂಗ್ ಪಾಕಿಸ್ತಾನಿ ಗುಪ್ತಚರ ಸಂಸ್ಥೆಯ ಹ್ಯಾಂಡ್ಲರ್‌ಗಳೊಂದಿಗೆ ನಿಯಮಿತವಾಗಿ ಸಂಪರ್ಕದಲ್ಲಿದ್ದ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಹನಿಟ್ರ್ಯಾಪ್ ಮತ್ತು ಹಣಕಾಸಿನ ಕೊಡುಗೆ ತನಿಖೆಯ ಸಮಯದಲ್ಲಿ, ಇಶಾ ಶರ್ಮಾ ಎಂಬ ಕಾವ್ಯನಾಮದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪಾಕಿಸ್ತಾನದ ಮಹಿಳಾ ಹ್ಯಾಂಡ್ಲರ್ ಸಿಂಗ್ ಅವರನ್ನು ಹನಿಟ್ರ್ಯಾಪ್ ಮಾಡಿದ್ದಾರೆ ಎಂದು ಹೇಳಲಾಗಿದೆ. ಬೇಹುಗಾರಿಕೆ ಚಟುವಟಿಕೆಗಳಲ್ಲಿ ಸಹಕರಿಸಿದ್ದಕ್ಕಾಗಿ ಸಿಂಗ್‌ಗೆ ಹಣಕಾಸು ಪ್ರೋತ್ಸಾಹ ನೀಡುವ ಭರವಸೆ ನೀಡಿದ್ದಾನೆ ಎಂದು ಹೇಳಲಾಗಿದೆ. ಸಿಂಗ್ ಹಣಕ್ಕೆ ಪ್ರತಿಯಾಗಿ ಭಾರತದ ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಸೂಕ್ಷ್ಮ ಮಾಹಿತಿಯನ್ನು ಸಂವಹನ ನಡೆಸಿದ್ದಾನೆ ಎಂದು ವರದಿಯಾಗಿದೆ.

ಸಿಂಗ್ ಕಳೆದ ಎರಡು ವರ್ಷಗಳಿಂದ ಸಾಮಾಜಿಕ ಮಾಧ್ಯಮ ವೇದಿಕೆಗಳ ಮೂಲಕ ಪಾಕಿಸ್ತಾನದ ಗುಪ್ತಚರ ಕಾರ್ಯಕರ್ತರೊಂದಿಗೆ ಸಂಪರ್ಕದಲ್ಲಿದ್ದಾರೆ ಎಂದು ಪೊಲೀಸರು ಗಮನಿಸಿದ್ದಾರೆ. ಇದು ಬೇಹುಗಾರಿಕೆ ಚಟುವಟಿಕೆಗಳಲ್ಲಿ ಅವರ ಪಾಲ್ಗೊಳ್ಳುವಿಕೆಯ ವ್ಯಾಪ್ತಿಯ ಬಗ್ಗೆ ಮತ್ತಷ್ಟು ಕಳವಳವನ್ನು ವ್ಯಕ್ತಪಡಿಸಿದೆ.

# ಪಶ್ಚಿಮ ಬಂಗಾಳದಲ್ಲಿ ಒಡಿಶಾ ಮೂಲದ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ಸಾಮೂಹಿಕ ಅತ್ಯಾಚಾರ

■ ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಪಶ್ಚಿಮ ಬಂಗಾಳದ ಪಶ್ಚಿಮ ಬರ್ಧಮಾನ್ ಜಿಲ್ಲೆಯಲ್ಲಿ ಒಡಿಶಾ ಮೂಲದ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿರುವ ಬಗ್ಗೆ ಶನಿವಾರ (ಅ.11) ವರದಿಯಾಗಿದೆ.

ಶುಕ್ರವಾರ (ಅ. 10) ರಾತ್ರಿ ದುರ್ಗಾಪುರದ ಖಾಸಗಿ ವೈದ್ಯಕೀಯ ಕಾಲೇಜು ಆವರಣದ ಹೊರಗೆ ಎರಡನೇ ವರ್ಷದ ವಿದ್ಯಾರ್ಥಿನಿ ತನ್ನ ಸ್ನೇಹಿತರೊಬ್ಬರ ಜೊತೆ ಊಟಕ್ಕೆ ಹೋಗಿದ್ದಾಗ ದೌರ್ಜನ್ಯ ನಡೆದಿದೆ ಎಂದು ಆಕೆಯ ಕುಟುಂಬಸ್ಥರು ತಿಳಿಸಿದ್ದಾರೆ.

ಒಡಿಶಾದ ಜಲೇಶ್ವರ ಮೂಲದ ಸಂತ್ರಸ್ಥೆ ವಿದ್ಯಾರ್ಥಿನಿ ಹತ್ತಿರದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಪೊಲೀಸ್ ಅಧಿಕಾರಿಯನ್ನು ಉಲ್ಲೇಖಿಸಿ ವರದಿಗಳು ಹೇಳಿವೆ.




"ವಿದ್ಯಾರ್ಥಿನಿಯ ಕುಟುಂಬ ಸದಸ್ಯರು ನೀಡಿದ ದೂರಿನ ಆಧರಿಸಿ ನಾವು ತನಿಖೆ ಪ್ರಾರಂಭಿಸಿದ್ದೇವೆ" ಎಂದು ಪೊಲೀಸರು ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ವಿದ್ಯಾರ್ಥಿನಿಯ ಪೋಷಕರು, "ನಮ್ಮ ಮಗಳ ಸ್ನೇಹಿತರಿಂದ ಕರೆ ಬಂದ ನಂತರ ಇಂದು ಬೆಳಿಗ್ಗೆ ದುರ್ಗಾಪುರ ತಲುಪಿದ್ದೇವೆ" ಎಂದು ಹೇಳಿದ್ದಾರೆ.

ಶುಕ್ರವಾರ (ಅಕ್ಟೋಬರ್ 10) ರಾತ್ರಿ 10 ಗಂಟೆ ಸುಮಾರಿಗೆ ತನ್ನ ಮಗಳು ಕಾಲೇಜು ಕ್ಯಾಂಪಸ್‌ನಿಂದ ಸ್ನೇಹಿತೆಯೊಬ್ಬಳೊಂದಿಗೆ ಊಟಕ್ಕೆ ಹೋಗಿದ್ದಾಗ ಸಾಮೂಹಿಕ ಅತ್ಯಾಚಾರಕ್ಕೊಳಗಾಗಿದ್ದಾಳೆ ಎಂದು ತಾಯಿ ಹೇಳಿಕೊಂಡಿದ್ದಾರೆ.

"ನಾವು ಇಂದು ಬೆಳಿಗ್ಗೆ ಇಲ್ಲಿಗೆ ಬಂದು ಪೊಲೀಸರಿಗೆ ದೂರು ನೀಡಿದ್ದೇವೆ. ಕಾಲೇಜು ಶೈಕ್ಷಣಿಕವಾಗಿ ಉತ್ತಮವಾಗಿದೆ ಎಂದು ನಾವು ಕೇಳ್ಪಟ್ಟಿದ್ದೆವು. ಹಾಗಾಗಿ, ನಾವು ನಮ್ಮ ಮಗಳನ್ನು ಇಲ್ಲಿ ವೈದ್ಯಕೀಯ ಅಧ್ಯಯನಕ್ಕೆ ಕಳುಹಿಸಿದ್ದೇವೆ" ಎಂದು ವಿದ್ಯಾರ್ಥಿನಿಯ ತಂದೆ ತಿಳಿಸಿದ್ದಾರೆ.


ಶುಕ್ರವಾರ (ಅಕ್ಟೋಬರ್ 10) ರಾತ್ರಿ 8–8.30 ರ ನಡುವೆ ವಿದ್ಯಾರ್ಥಿನಿ ತನ್ನ ಸ್ನೇಹಿತೆಯೊಂದಿಗೆ ಕ್ಯಾಂಪಸ್ ಹೊರಗೆ ಹೋಗಿದ್ದರು. ಈ ವೇಳೆ ಮೂವರು ಅಪರಿಚಿತ ವ್ಯಕ್ತಿಗಳು ಅಲ್ಲಿಗೆ ಬಂದಿದ್ದಾರೆ. ಈ ವೇಳೆ ಸ್ನೇಹಿತೆ ಆಕೆಯನ್ನು ಒಂಟಿಯಾಗಿ ಬಿಟ್ಟು ಹೋಗಿದ್ದಾಳೆ. ಆ ವ್ಯಕ್ತಿಗಳು ಆಕೆಯ ಫೋನ್ ಕಸಿದುಕೊಂಡು ಕ್ಯಾಂಪಸ್ ಹೊರಗಿನ ಕಾಡಿಗೆ ಕರೆದೊಯ್ದು, ಅಲ್ಲಿ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಾರೆ. ಘಟನೆಯ ಬಗ್ಗೆ ಯಾರಿಗಾದರೂ ಹೇಳಿದರೆ ಭೀಕರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಬೆದರಿಕೆ ಹಾಕಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿರುವುದಾಗಿ ಪೊಲೀಸರು ಹೇಳಿದ್ದಾರೆ.

## ನೀರು ಹಾಯಿಸಲು ಹೋದ ಸಹೋದರರ ಮೇಲೆ ಚಿರತೆ ದಾಳಿ; ಓರ್ವ ಸಾವು, ಮತ್ತೊರ್ವ ಗಂಭೀರ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಚಿರತೆ ದಾಳಿಯಿಂದ ಓರ್ವ ರೈತ ಸಾವನ್ನಪ್ಪಿದ್ದು, ಇನ್ನೋರ್ವನಿಗೆ ಗಂಭೀರ ಗಾಯವಾಗಿರುವ ಘಟನೆ ಹಾವೇರಿ ಜಿಲ್ಲೆ ರಟ್ಟಿಹಳ್ಳಿ ತಾಲೂಕಿನ ಕಣವಿಸಿದ್ದಗೇರಿ ಗ್ರಾಮದಲ್ಲಿ ಜರುಗಿದೆ.


ಮೆಕ್ಕೆಜೋಳಕ್ಕೆ ನೀರು ಹಾಯಿಸಲು ಹೋದಾಗ ಸಹೋದರರ ಮೇಲೆ ರಾತ್ರಿ 11 ಗಂಟೆ ಸುಮಾರಿಗೆ ಚಿರತೆ ದಾಳಿ ಮಾಡಿದೆ. ಘಟನೆಯಲ್ಲಿ 28 ವರ್ಷದ ಬೀರೇಶ ಬಳಗಾವಿ



ಮೃತ ಯುವ ರೈತ. 32 ವರ್ಷದ ಗಣೇಶ ಬಳಗಾವಿ ಗಂಭೀರ ಗಾಯಗೊಂಡಿದ್ದಾರೆ. ಗಾಯಗೊಂಡ ಗಣೇಶನನ್ನ ಜಿಲ್ಲಾಸ್ಪತ್ರೆ ದಾಖಲು ಮಾಡಲಾಗಿದೆ.

ಸ್ಥಳಕ್ಕೆ ಅರಣ್ಯ ಇಲಾಖೆಯ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ರಟ್ಟಿಹಳ್ಳಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಕುಸ್ತಿಯಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಮುನ್ಸಿಪಲ್ ಪದವಿಪೂರ್ವ ಕಾಲೇಜಿನ ವತಿಯಿಂದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಕುಸ್ತಿ ಪಂದ್ಯಾವಳಿಯಲ್ಲಿ ಮನೋರಮಾ ಕಾಲೇಜಿನ ವಿದ್ಯಾರ್ಥಿ ಪವನಕುಮಾರ ಮೇಲ್ಮನಿ ಭಾಗವಹಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಯ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಶಾಹಿದಾ ಶಿರಹಟ್ಟಿ, ಸವಿತಾ ಪೂಜಾರ, ಪ್ರೊ. ಯಶವಂತ, ಪ್ರಿಯಾಂಕಾ, ದೈಹಿಕ ನಿರ್ದೇಶಕರಾದ ಖಯುಮ ಎಂ.ನವಲೂರ, ಆಫೀಸ್ ಸುಪರಿಡೆಂಡೆಂಟ್ ಉಮಾ ದಿನ್ನಿ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.


### ಬಿಳಿ ಜೋಳ ಕೃಷಿ ಹುಟ್ಟುವಳಿ ಖರೀದಿ ಕುರಿತು ಜರುಗಿದ ಸಭೆಯಲ್ಲಿ ಡಿಸಿ ಮಾಹಿತಿ

# ಬಿಳಿಜೋಳ ಖರೀದಿಗೆ ಬೆಂಬಲ ಬೆಲೆ ನಿಗದಿ

■ ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಋತುವಿನಲ್ಲಿ (ಏಕ ರೂಪ ಪದ್ಧತಿಯಲ್ಲಿ) ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತ–ರಿಂದ ಎಫ್.ಎ.ಕ್ಯೂ ಗುಣಮಟ್ಟದ ಬಿಳಿಜೋಳ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಶುಕ್ರವಾರ 2025–26ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಋತುವಿನಲ್ಲಿ (ಏಕ ರೂಪ ಪದ್ಧತಿಯಲ್ಲಿ) ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಬಿಳಿ ಜೋಳ ಕೃಷಿ ಹುಟ್ಟುವಳಿ ಖರೀದಿ



ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 15 ಕ್ವಿಂಟಲ್‌ನಂತೆ ಗರಿಷ್ಠ 150 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಬಿಳಿ ಜೋಳ ಖರೀದಿಸಲು ಹಾಗೂ ಬಿಳಿ ಜೋಳ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಬಿಳಿ ಜೋಳ ಉತ್ಪನ್ನವನ್ನು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು.

ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಎಫ್.ಎ.ಕ್ಯೂ ಗುಣಮಟ್ಟ ಪರಿಶೀಲನೆಗಾಗಿ ಲಭ್ಯವಿರುವ ಅಧಿಕಾರಿ/ಸಿಬ್ಬಂದಿಗಳನ್ನು ಬಳಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಬಿಳಿಜೋಳ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ಬಿಳಿ ಜೋಳ (ಹೈಬ್ರೀಡ್) 3699 ರೂ, ಬಿಳಿಜೋಳ (ಮಾಲ್ದಂಡಿ) 3749 ರೂ.ಗಳಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಮತ್ತು ನಿಗಮದ ವತಿಯಿಂದ ನೇಮಿಸಲಾಗುವ ಉಪಏಜೆನ್ಸಿಗಳಾದ TAPCMS/ PACS/PFOs/ SHGs ಖರೀದಿಸಲು ಅನುಮೋದನೆಯನ್ನು ನೀಡಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ರೈತರಿಂದ ಬಿಳಿ ಜೋಳ ಉತ್ಪನ್ನವನ್ನು ನೋಂದಣಿಗೆ 1–12–2025ರಿಂದ 31–3–2026ರವರೆಗೆ ಹಾಗೂ ಖರೀದಿ ಕಾರ್ಯಕ್ಕೆ 1–1–2026ರಿಂದ 31–3–2026ರವರೆಗೆ ಅವಧಿಯನ್ನು ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆ, ಕೃಷಿ ಮಾರಾಟ ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಜಂಟಿ ಕೃಷಿ ನಿರ್ದೇಶಕರಿಂದ ಮುಂಗಾರು ಹಾಗೂ ಹಿಂಗಾರು ಋತುವಿನಲ್ಲಿ ಬಿತ್ತನೆಯಾಗುವ ಕ್ಷೇತ್ರದ ಬಗ್ಗೆ ಮಾಹಿತಿ ಪಡೆದುಕೊಂಡು ಅದರಂತೆ ಖರೀದಿ ಕೇಂದ್ರವನ್ನು ತೆರೆಯಲು ಜಿಲ್ಲಾ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ ಗದಗ ಇವರಿಗೆ ಸೂಚಿಸಲಾಯಿತು ಹಾಗೂ ಸರ್ಕಾರ ಬೆಂಬಲ ಬೆಲೆ ಬಿಳಿ ಜೋಳ ಹುಟ್ಟುವಳಿ ಖರೀದಿ ಕುರಿತು ರೈತರು ಸದುಪಯೋಗ ಪಡೆದುಕೊಳ್ಳಲು ರೈತರಿಗೆ ತಿಳುವಳಿಕೆ ನೀಡಲು ಕರಪತ್ರಗಳ ಮೂಲಕ ಹಾಗೂ ಮಾಧ್ಯಮಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ತಿಳಿಸಲಾಯಿತು.

## ಫುಟ್‌ಬಾಲ್‌ನಲ್ಲಿ ವಿಭಾಗ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಗದುಗಿನ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಾಥಮಿಕ ಶಾಲಾ ಹಂತದ ಫುಟ್‌ಬಾಲ್ ಆಟದಲ್ಲಿ ಎಸ್.ಎಸ್.ಕೆ. ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳು ಸತತವಾಗಿ ಮೂರನೇ ಬಾರಿ ಜಯಭೇರಿ ಬಾರಿಸಿ ವಿಭಾಗಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾಸಂಸ್ಥೆಯ ಅಧ್ಯಕ್ಷ ಲೋಕನಾಥ ಕಬಾಡಿ, ಚೇರ್‌ಮನ್ ಗೋವಿಂದರಾಜ ಬಸವಾ, ವೈಸ್‌ಚೇರಮನ್ ದತ್ತು ಪವಾರ ಉತ್ತಮ ಸ್ಪರ್ಧೆ ನೀಡಿ ಗೆಲುವನ್ನು ಸಾಧಿಸಿದ ವಿದ್ಯಾರ್ಥಿಗಳಿಗೆ ಹಾಗೂ ದೈಹಿಕ ಶಿಕ್ಷಕ ಅನಿಲ್ ಕುಮಾರ್ ಅವರಿಗೆ ಅಭಿನಂದನೆ ಸಲ್ಲಿಸಿದರು.

ಮುಖ್ಯೋಪಾಧ್ಯಾಯರಾದ ಶಿಲ್ಪಾ ಬೆಣಕಲ್, ಚೇತನಾ ಹವಳದ ಹಾಗೂ ಸಹ ಶಿಕ್ಷಕರು ವಿದ್ಯಾರ್ಥಿಗಳ ಸಾಧನೆಗೆ ಶುಭ ಕೋರಿದ್ದಾರೆ.

### ಸೂರಣಗಿ ಗ್ರಾಮ ಪಂಚಾಯಿತಿಯಲ್ಲಿ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆ

# ಎಲ್ಲರಿಗೂ ಯೋಜನೆಯ ಲಾಭ ದೊರಕಲಿ


■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಶುಕ್ರವಾರ ತಾಲೂಕಿನ ಸೂರಣಗಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಫಲಾನುಭವಿಗಳ ಕುಂದುಕೊರತೆ ಸಭೆಯು ಸಮಿತಿಯ ತಾಲೂಕಾಧ್ಯಕ್ಷ ನಾಗರಾಜ ಮಡಿವಾಳರ ಅಧ್ಯಕ್ಷತೆಯಲ್ಲಿ ಜರುಗಿತು. ಅನುಷ್ಠಾನ ಸಮಿತಿಯ ಇಲಾಖೆಗಳ ಅಧಿಕಾರಿಗಳು ತಾವು ಸಾಧಿಸಿದ ಪ್ರಗತಿ ಕುರಿತು ಸಭೆಗೆ ಮಾಹಿತಿ ನೀಡಿದರು.

ಬಸ್ ನಿಲ್ದಾಣದ ಒಳಗೆ ಎಲ್ಲ ಬಸ್‌ಗಳು ಬಂದು ಹೋಗಬೇಕು. ನಿಲ್ದಾಣದ ಒಳಗಡೆ ಸಿಸಿ ರಸ್ತೆ ನಿರ್ಮಿಸಬೇಕು ಮತ್ತು ಲೈಟ್ ವ್ಯವಸ್ಥೆ ಮಾಡಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ, ರಾಜ್ಯ ಕಾಂಗ್ರೆಸ್ ಪಕ್ಷದ ಪಂಚ ಗ್ಯಾರಂಟಿ ಯೋಜನೆ ಬಡವರ ಜೀವನ ಮಟ್ಟವನ್ನು ಮೇಲ್ಪಂಕ್ತಿಗೇರಿಸಿದೆ. ಪಂಚ ಗ್ಯಾರಂಟಿ ಯೋಜನೆಗಳಿಂದ ಯಾವುದೇ ಅರ್ಹ ಫಲಾನುಭವಿಗಳು ವಂಚಿತರಾಗಬಾರದು. ಯೋಜನೆಗಳನ್ನು ಬಡವರ ಮನೆಗೆ ತಲುಪಿಸುವ ಕಾರ್ಯವನ್ನು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮಾಡುತ್ತಿದೆ. ಈ ನಿಟ್ಟಿನಲ್ಲಿ ತಾಲೂಕಿನಲ್ಲಿ ಎಲ್ಲರಿಗೂ ಗ್ಯಾರಂಟಿ ಯೋಜನೆಯ ಲಾಭ ದೊರಕಬೇಕು ಎಂಬ ಉದ್ದೇಶದಿಂದ ಸಮಿತಿ ವತಿಯಿಂದ ಗ್ರಾಮ ಸಭೆ ನಡೆಸುತ್ತಿದ್ದೇವೆ. ಗ್ರಾಮಗಳಿಗೆ ತೆರಳಿ ಅಲ್ಲಿನ ಫಲಾನುಭವಿಗಳ ಸಮಸ್ಯೆಗಳ ಕುರಿತು ಅರಿತುಕೊಂಡು ಪರಿಹರಿಸುವ ಕೆಲಸ ಮಾಡಲಾಗುತ್ತಿದೆ. ಸೂರಣಗಿ ಗ್ರಾಮದಲ್ಲಿ ಗೃಹಲಕ್ಷ್ಮೀ ಯೋಜನೆಯಡಿ 1,880 ಫಲಾನುಭವಿಗಳು ಇದ್ದು, ತಿಂಗಳಿಗೆ ಅಂದಾಜು 38 ಲಕ್ಷ ರೂಪಾಯಿ ಯೋಜನೆಯಡಿ ಬರುತ್ತಿದೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಗ್ರಾಮ ಪಂಚಾಯಿತಿ ಅಧ್ಯಕ್ಷ ಶಂಕರಣ್ಣ ಶೀರನಹಳ್ಳಿ, ಕೋಟೆಪ್ಪ ವರ್ದಿ, ವಿಜಯಣ್ಣ ಹಳ್ಳಿ, ರಂಜಾನ್ ನದಾಫ್, ಶಶಿಕಲಾ ಬಡಿಗೇರ, ಹಸನಸಾಬ್ ಜಂಗ್ಲಿ, ರಮೇಶ ಬಾರಕಿ, ಖಾದರಸಾಬ್ ರಿತ್ತಿ, ಧರ್ಮರ, ಪಿಡಿಒ ಆರ್.ಎಂ. ರೋಣದ, ಕಾರ್ಯದರ್ಶಿ ಎಸ್. ಎಫ್. ಹಳ್ಯಾಳ ಇದ್ದರು.



12 ಫಲಾನುಭವಿಗಳು ಜಿಎಸ್‌ಟಿ ಸಲ್ಲಿಸಿದ್ದು, ಇದರಿಂದಾಗಿ ಅವರಿಗೆ ಹಣ ಬರುತ್ತಿಲ್ಲ. ತಾಂತ್ರಿಕ ಕಾಣರಗಳಿಂದಾಗಿ 9 ಮಹಿಳೆಯರಿಗೆ ಗೃಹಲಕ್ಷ್ಮೀ ಹಣ ಬರುತ್ತಿಲ್ಲ. ಈ ಕುರಿತು ಇರುವ ಸಮಸ್ಯೆಯನ್ನು ಶೀಘ್ರವೇ ಬಗೆಹರಿಸಿ ಅವರಿಗೂ ಹಣ ಬರುವ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದ ನಾಗರಾಜ ಮಡಿವಾಳರ, ಯೋಜನೆಗಳ ಅನುಷ್ಠಾನ ಅಧಿಕಾರಿಗಳು ತಾಲೂಕಿನಲ್ಲಿ ಉತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಇದರಿಂದಾಗಿ ಎಲ್ಲರಿಗೂ ಯೋಜನೆಗಳ ಲಾಭ ದಕ್ಕುತ್ತಿದೆ ಎಂದು ಹೇಳಿದರು.

# ರೈತರ ಸಮಸ್ಯೆ ಪರಿಹರಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಜಿಲ್ಲೆಯ ವಿವಿಧ ಭಾಗಗಳಲ್ಲಿ ಬೆಳೆ ಹಾನಿ, ಬೆಳೆ ವಿಮೆ, ಖರೀದಿ ಕೇಂದ್ರ ತೆರೆಯುವ ಬೇಡಿಕೆ ಹಾಗೂ ಬೆಳೆ ಸಾಲ ಪಡೆದ ರೈತರಿಗೆ ಬ್ಯಾಂಕ್‌ಗಳಿಂದ ನೋಟಿಸ್ ಕಳುಹಿಸುತ್ತಿರುವದನ್ನು ಖಂಡಿಸಿ ಜಿಲ್ಲಾಧಿಕಾರಿಗಳಿಗೆ ಮತ್ತು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಯಲ್ಲಪ್ಪಗೌಡ ಕರಮಡಿ ಮಾತನಾಡಿ, ಜಿಲ್ಲೆಯಾದ್ಯಂತ ಬೆಳೆ ಸಮೀಕ್ಷೆ ಸಮರ್ಪಕವಾಗಿ ನಡೆಯದೆ ಅನೇಕ ರೈತರು ನಷ್ಟ ಅನುಭವಿಸುತ್ತಿದ್ದಾರೆ. ಪ್ರತಿಯೊಬ್ಬ ರೈತನಿಗೂ ಕನಿಷ್ಠ 30 ಸಾವಿರ ರೂ ಬೆಳೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸೋಮಶೇಖರ ಹಿರೇಮಠ ಮಾತನಾಡಿ, ರೈತರ ಬೆಳೆ ವಿಮೆಯನ್ನು ತ್ವರಿತವಾಗಿ ಮಂಜೂರು ಮಾಡಬೇಕು ಹಾಗೂ ಮೆಕ್ಕೆಜೋಳ, ಈರುಳ್ಳಿ ಸೇರಿದಂತೆ ಎಲ್ಲ ಬೆಳೆಗಳಿಗೆ ಖರೀದಿ ಕೇಂದ್ರಗಳನ್ನು ಶೀಘ್ರದಲ್ಲಿ ಆರಂಭಿಸಬೇಕು ಎಂದು ವಿನಂತಿಸಿದರು. ಈ ಸಂದರ್ಭದಲ್ಲಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಬಸವರಾಜ ಅಸುಂಡಿ, ಜಿಲ್ಲಾ ಗೌರವಾಧ್ಯಕ್ಷ ಮಹಾದೇವಗೌಡ ನೀಲಪ್ಪಗೌಡರ, ಜಿಲ್ಲಾ ಕಾರ್ಯದರ್ಶಿ ಟಾಕಪ್ಪ ಸಾತಪುತೆ, ಜಿಲ್ಲಾ ಉಪಾಧ್ಯಕ್ಷ ಶಂಕರಗೌಡ ಪಾಟೀಲ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮಲ್ಲಿಕಾರ್ಜುನ ಪಾಟೀಲ, ಜಿಲ್ಲಾ ಯುವ ಪ್ರಮುಖ ಹಾಲಪ್ಪ ಶಿವಶೆಟ್ಟಿ, ಜಿಲ್ಲಾ ಖಜಾಂಚಿ ವೆಂಕಟೇಶ ಸೂರಣಗಿ, ಜಿಲ್ಲಾ ಸದಸ್ಯರಾದ ನಿಂಗಪ್ಪ ಬನ್ನಿಕೊಪ್ಪ, ರಾಜಶೇಖರ ಹಿರೇಮಠ, ಬಸವರಾಜ ಬೆಂತೂರ, ಡಿ.ಆರ್. ಪಾಟೀಲ, ಮಹಾಂತೇಶ್ ಶೋಗೋಟಿ, ವೆಂಕಟೇಶ್ ಪಾಟೀಲ, ಚಂದ್ರು ಹೂಗಾರ, ಪದ್ಮನಗೌಡ ಪಾಟೀಲ, ಪ್ರಭಾಕರ ಜಾಧವ, ಕೃಷ್ಣಪ್ಪ ಬಡಿಗೇರ, ಅರುಣ್ ಕಾರಭಾರಿ, ಸದಾನಂದ ಪೂಜಾರ, ಟಾಕ್ರೆಪ್ಪ ಲಮಾಣಿ, ಶೇಖಪ್ಪ ಲಮಾಣಿ, ರಾಮಪ್ಪ ಡಂಬಳ, ಚಂದ್ರು ಕಾರಭಾರಿ, ಪರಶುರಾಮ ಲಮಾಣಿ ಮುಂತಾದವರಿದ್ದರು.

### ರಾಣಿ ಚನ್ನಮ್ಮ ಮಹಿಳಾ ಬಳಗದ ಮಾಸಿಕ ಸಭೆಯಲ್ಲಿ ಶರಣಬಸಪ್ಪ ಗುಡಿಮನಿ ಅಭಿಮತ

# ಮಹಿಳಾ ಸಂಘಟನೆಗಳು ಆರ್ಥಿಕವಾಗಿ ಸಬಲರಾಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಸಂಘಟನೆಗಳು ಆರ್ಥಿಕವಾಗಿ ಸಬಲರಾಗಲು ಮಹಿಳೆಯರನ್ನು ಪ್ರೇರೇಪಿಸಬೇಕು. ಪಂಚಮಸಾಲಿ ಸಮಾಜದ ತಾಯಂದಿರರು ಸಮಾಜ ಸಂಘಟನೆಯೊಂದಿಗೆ ಆರ್ಥಿಕವಾಗಿ ಸದೃಢತೆ ಹೊಂದಬೇಕೆಂದು ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹೇಳಿದರು.

ಅವರು ಗದುಗಿನ ರಾಣಿ ಚನ್ನಮ್ಮ ಮಹಿಳಾ ಬಳಗದಿಂದ ಜರುಗಿದ ಮಾಸಿಕ ಸಭೆಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಮನೆಯ ಆರ್ಥಿಕತೆಯ ಸುಧಾರಣೆಗಾಗಿ ಮಹಿಳೆಯರು ದುಡಿಮೆಗೆ ಮುಂದಾಗಬೇಕು. ಹಣವನ್ನು ಉಳಿತಾಯ ಮಾಡಿ ಅದನ್ನು ಸುರಕ್ಷಿತ ಬ್ಯಾಂಕ್‌ಗಳಲ್ಲಿ ಇರಿಸಿ, ಅದರಿಂದ ಬರುವ ಲಾಭವನ್ನು ಉಪಯೋಗ ಮಾಡಿಕೊಳ್ಳಬೇಕು ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಚೇಂಬರ್ ಆಫ್ ಕಾಮರ್ಸ್‌ನ ಪದಾಧಿಕಾರಿ ಅಶೋಕ ಸಂಕಣ್ಣವರ, ಮಹಿಳೆಯರು ಸದೃಢ ಮನಸ್ಸಿನವರು ಹಾಗೂ ಅಚಲ ನಿರ್ಧಾರದವರು. ಇವರು ಮನಸ್ಸು ಮಾಡಿದಲ್ಲಿ ಕೆಲಸವನ್ನು ನಿಷ್ಠೆಯಿಂದ ಮಾಡಿ ಪೂರ್ತಿಗೊಳಿಸುತ್ತಾರೆ. ಮಹಿಳಾ ಸಮುದಾಯವು ಆರ್ಥಿಕ ಉಳಿಕೆಗಾಗಿ ಶ್ರಮಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಚೇಂಬರ್ ಆಫ್ ಕಾಮರ್ಸ್‌ನ ಮಹಿಳಾ ಘಟಕದ ಮಾಜಿ ಅಧ್ಯಕ್ಷೆ ಜಯಶ್ರೀ ಪಾಟೀಲ ಮಾತನಾಡಿ, ಸಮಾಜದ ಮಹಿಳೆಯರ ಶ್ರೇಯೋಭಿವೃದ್ಧಿಗಾಗಿಯೇ ಈ ಸಂಘವನ್ನು ನಡೆಸುತ್ತಿದ್ದು, ಇಲ್ಲಿ ಮಕ್ಕಳ ವಿದ್ಯಾಭ್ಯಾಸಕ್ಕೆ ಸವಲತ್ತುಗಳನ್ನು ಸಹ ನೀಡಲಾಗುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷೆ ಜಯಶ್ರೀ ಉಗಲಾಟದ ಮಾತನಾಡಿ, ಮಹಿಳೆ ಆರ್ಥಿಕವಾಗಿ ಸಧೃಡವಾದಾಗ ಮಾತ್ರ ಎಲ್ಲವನ್ನು ನಿಭಾಯಿಸಬಲ್ಲಳು. ಕೂಡಿಟ್ಟ ಹಣವನ್ನು ಬೇರೆ ಕೆಲಸಗಳಿಗೆ ವಿನಿಯೋಗಿಸಿದಾಗ ಅದು ಸದ್ಬಳಕೆಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ರಾಣಿ ಚನ್ನಮ್ಮ ಸಂಘಟನೆಯಿಂದ ಚೇಂಬರ್ ಆಫ್ ಕಾಮರ್ಸ್‌ಗೆ ಪದಾಧಿಕಾರಿಗಳಾಗಿ ಆಯ್ಕೆಯಾದ ಪಂಚಮಸಾಲಿ ಸಮಾಜದ ಶರಣಬಸಪ್ಪ ಗುಡಿಮನಿ, ಅಶೋಕ ಸಂಕಣ್ಣವರ, ಚೆನ್ನವೀರಪ್ಪ ಹುಣಸೀಕಟ್ಟಿ, ಪ್ರಕಾಶ ಉಗಲಾಟದ ಇವರನ್ನು ಸನ್ಮಾನಿಸಿ ಗೌರವಿಸಿಲಾಯಿತು.

ರೇಣುಕಾ ಅಮಾತ್ಯೆ ಮತ್ತು ಸುಜಾತಾ ಗುಡಿಮನಿ ಪ್ರಾರ್ಥಿಸಿದರು. ಕವಿತಾ ದಂಡಿನ ಸ್ವಾಗತಿಸಿದರು. ವಿದ್ಯಾ ಗಂಜಿಹಾಳ ನಿರ್ವಹಿಸಿದರು. ದೀಪಾ ಉಗಲಾಟ ನಿರೂಪಿಸಿದರು. ಕೊನೆಯಲ್ಲಿ ಸುಮಾ ಪಾಟೀಲ ವಂದಿಸಿದರು. ಕಾರ್ಯಕ್ರಮದಲ್ಲಿ ನೀಲಮ್ಮ ತೋಟದ, ಸುಶೀಲಾ ಸದಲಾಪೂರ, ಪುಷ್ಪಾ ವಾರದ, ಶಾರದಾ ಕರಮುಡಿ, ಅನ್ನಪೂರ್ಣ ಮಾಡಲಗೇರಿ, ಲಕ್ಷ್ಮೀ ಹಳ್ಳಿಕೇರಿ, ಸುಜಾತಾ ತಂಗೋಡಿ, ಗೀತಾ ಮಾವಿನಕಾಯಿ, ಈರಮ್ಮ ಮಾಡಲಗೇರಿ, ಗೀತಾ ಉಗಲಾಟದ, ಜ್ಯೋತಿ ಭಾವಿಕಟ್ಟಿ, ಮಂಜುಳಾ ತಂಗೋಡಿ, ವಿಜಯಲಕ್ಷ್ಮೀ ಇಳಕಲ್, ಅಕ್ಕಮ್ಮ ಗಡಾದ, ಮಾಲತಿ ಗೊಲ್ಲಪ್ಪನವರ, ಸುಮಂಗಲಾ ಮುಂತಾದವರು ಉಪಸ್ಥಿತರಿದ್ದರು.



ಚೇಂಬರ್ ಆಫ್ ಕಾಮರ್ಸ್‌ನ ಪದಾಧಿಕಾರಿ ಚೆನ್ನವೀರಪ್ಪ ಹುಣಸಿಕಟ್ಟಿ ಹಾಗೂ ಪ್ರಕಾಶ ಉಗಲಾಟದ ಮಾತನಾಡಿ, ಪಂಚಮಸಾಲಿ ಮಹಿಳಾ ಸಮುದಾಯವು ಸಾಮಾನ್ಯವಾಗಿ ಕೃಷಿಯನ್ನೇ ಅವಲಂಬಿಸಿದ್ದು, ಬದಲಾದ ಕಾಲಮಾನದಿಂದ ಮಹಿಳೆಯರು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುವ ಮೂಲಕ ಆರ್ಥಿಕ ಸದೃಢತೆ ಹೊಂದುತ್ತಿದ್ದಾರೆ. ನಮ್ಮ ಸಮಾಜದವರು ಎಲ್ಲ ಕ್ಷೇತ್ರಗಳಲ್ಲಿಯೂ ಮುಂಚೂಣಿಗೆ ಬರುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

## ಭೀಕರ ರಸ್ತೆ ಅಪಘಾತ; ಇಬ್ಬರು ಬೈಕ್ ಸವಾರರು ಸ್ಥಳದಲ್ಲೇ ಸಾವು!




■ವಿಜಯಸಾಕ್ಷಿ ಸುದ್ದಿ, ವಿಜಯನಗರ

ಜಿಲ್ಲೆಯ ಹಡಗಲಿ ಮೋರಗೇರಿ ರಸ್ತೆಯ ಹೊಳಗುಂದಿ ಕೆ.ಇ.ಬಿ. ಗ್ರೀಡ್ ಸಮೀಪ ಶುಕ್ರವಾರ ರಾತ್ರಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ದುರ್ಘಟನೆ ನಡೆದಿದೆ.

ಗದ್ದಿಕೇರಿ ಗ್ರಾಮದ ನಿವಾಸಿಗಳಾದ ಸುಗ್ನಳ್ಳಿ ಹನುಮರೆಡ್ಡಿ (63) ಹಾಗೂ ಸುಗ್ನಳ್ಳಿ ಬಸವರೆಡ್ಡಿ (58) ಮೃತಪಟ್ಟವರು ಎಂದು ಗುರುತಿಸಲಾಗಿದೆ.

ಹನುಮರೆಡ್ಡಿ ಅವರು ಗದಗಿನಲ್ಲಿ ಸಂಬಂಧಿಕರ ತಿಥಿ ಕಾರ್ಯ ಮುಗಿಸಿಕೊಂಡು ರಾತ್ರಿ ಹಡಗಲಿಗೆ ವಾಪಸ್ಸಾಗಿದ್ದರು. ಗದ್ದಿಕೇರಿಗೆ ಬಸ್ ಸೌಲಭ್ಯ ಇಲ್ಲದ ಕಾರಣ, ಸಂಬಂಧಿ ಬಸವರೆಡ್ಡಿಗೆ ಕರೆಮಾಡಿ ಕರೆದುಕೊಂಡು ಹೋಗುವಂತೆ ತಿಳಿಸಿದ್ದಾರೆ. ಬಸವರೆಡ್ಡಿ ಅವರು ತಮ್ಮ ಬೈಕ್ ನಲ್ಲಿ ಹನುಮರೆಡ್ಡಿಯನ್ನು ಹಿಂಬದಿಯಲ್ಲಿ ಕೂರಿಸಿಕೊಂಡು ಬರುತ್ತಿದ್ದಾಗ ದುರಂತ ಸಂಭವಿಸಿದೆ.

ಈ ವೇಳೆ ಅಪರಿಚಿತ ವಾಹನ ವೇಗವಾಗಿ ಬಂದು ಬೈಕ್ ಗೆ ಡಿಕ್ಕಿ ಹೊಡೆದಿದೆ. ಇನ್ನೂ ಡಿಕ್ಕಿ ರಭಸಕ್ಕೆ ಬೈಕ್ ನಲ್ಲಿದ್ದ ಸುಗ್ನಳ್ಳಿ ಹನುಮರೆಡ್ಡಿ, ಸುಗ್ನಳ್ಳಿ ಬಸವರೆಡ್ಡಿ ರಸ್ತೆಗೆ ಬಿದ್ದಿದ್ದು,. ಗಂಭೀರ ಗಾಯಗೊಂಡ ಇಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಘಟನೆಯ ಬಳಿಕ ಚಾಲಕ ಪರಾರಿಯಾಗಿದ್ದಾನೆ.

ಈ ಸಂಬಂಧ ಸಂಜೀವರೆಡ್ಡಿ ಶನಿವಾರ ಮಧ್ಯರಾತ್ರಿ 12:30ಕ್ಕೆ ಹಡಗಲಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಇದರ ಆಧಾರದಲ್ಲಿ ಹಡಗಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 142/2025 ರ ಅಡಿಯಲ್ಲಿ ಭಾರತೀಯ ನ್ಯಾಯ ಸಂಹಿತೆ (BNS) ಕಲಂ 281, 106 ಹಾಗೂ ಐಎಂವಿ ಕಾಯಿದೆ ಕಲಂ 187 ರಡಿ ಪ್ರಕರಣ ದಾಖಲಾಗಿದೆ.

ಈ ದುರಂತ ಘಟನೆಯಿಂದ ಗದ್ದಿಕೇರಿ ಗ್ರಾಮದಲ್ಲಿ ಶೋಕದ ಛಾಯೆ ಆವರಿಸಿದ್ದು, ಸ್ಥಳೀಯರು ಆರೋಪಿಯನ್ನು ಬೇಗ ಬಂಧಿಸಲು ಒತ್ತಾಯ ವ್ಯಕ್ತಪಡಿಸಿದ್ದಾರೆ. ಸಿಪಿಐ ದೀಪಕ್ ಆರ್. ಭೂಸರೆಡ್ಡಿ, ಅಪಘಾತಕ್ಕೆ ಕಾರಣವಾದ ವಾಹನ ಮತ್ತು ಚಾಲಕನ ಪತ್ತೆಗಾಗಿ ತನಿಖೆ ತೀವ್ರಗೊಳಿಸಿದ್ದಾರೆ.

## ಬೆಂಗಳೂರಿನಲ್ಲಿ ಬಿಎಂಟಿಸಿ ಚಾಲಕನ ಯಡವಟ್ಟು; ಒಂಬತ್ತು ವಾಹನಗಳಿಗೆ ಡಿಕ್ಕಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಬಿಎಂಟಿಸಿ ಚಾಲಕನ ಯಡವಟ್ಟು ದೊಡ್ಡ ಅವಘಡಕ್ಕೆ ಕಾರಣವಾಯಿತು.

ಏಕಾಏಕಿ ನಿಯಂತ್ರಣ ತಪ್ಪಿದ ಬಿಎಂಟಿಸಿ ಬಸ್, 9ಕ್ಕೂ ಹೆಚ್ಚು ವಾಹನಗಳಿಗೆ ಡಿಕ್ಕಿ ಹೊಡೆದ ಘಟನೆ ಭಯಾನಕ ಪರಿಸ್ಥಿತಿ ಉಂಟುಮಾಡಿತು. ಈ ಘಟನೆ ಕ್ರೀಡಾಂಗಣದ 9ನೇ ಗೇಟ್ ಬಳಿ ನಡೆದಿದೆ. ಚಾಲಕನಿಗೆ ಪಿಡ್ಸ್ ಬಂದು ಅಪಘಾತ ಸಂಭವಿಸಿರಬಹುದೆಂದು ಶಂಕೆ ವ್ಯಕ್ತವಾಗಿದೆ.

ಸ್ಥಳಕ್ಕೆ ಕಬ್ಬನ್ ಪಾರ್ಕ್ ಸಂಚಾರಿ ಪೊಲೀಸರು ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ಅಪಘಾತದ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷೆಯಲ್ಲಿದೆ. ಗಾಯಾಳುಗಳ ಸ್ಥಿತಿ ಹಾಗೂ ಚಾಲಕನ ಆರೋಗ್ಯ ಸ್ಥಿತಿ ಇನ್ನೂ ಸ್ಪಷ್ಟವಾಗಿಲ್ಲ ಎನ್ನಲಾಗಿದೆ.

## ಈಜು ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಗರದ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಜರುಗಿದ ಪದವಿಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಹುಲಕೋಟಿಯ ಜಿ.ಸಿ.ಟಿ.ಎಂ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಾಣಿಜ್ಯ ವಿಭಾಗದ ವಿದ್ಯಾರ್ಥಿ ಶಿವಪ್ಪ ಬಸವರಾಜ ಕರಿಕಟ್ಟಿ 200 ಮೀಟರ್ ಫ್ರೀ ಸ್ಟೈಲ್ ಈಜು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ ಸಾಧಕ ವಿದ್ಯಾರ್ಥಿಗೆ ಕಾಲೇಜಿನ ಆಡಳಿತ ಮಂಡಳಿಯವರು, ಪ್ರಾಚಾರ್ಯರು ಮತ್ತು ಸಿಬ್ಬಂದಿ ವರ್ಗದವರು ಹಾರ್ದಿಕವಾಗಿ ಅಭಿನಂದಿಸಿದ್ದಾರೆ.

## ಧರೆಗುರುಳಿದ ಅರಳಿ ಮರ; ತಪ್ಪಿದ ಅನಾಹುತ



■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮದ ಬಂಡಿಹಾಳ ಓಣಿಯಲ್ಲಿ ಸುಮಾರ 50 ವರ್ಷಗಳಿಂದ ಬೆಳೆದು ನಿಂತಿದ್ದ ಅರಳಿ ಮರವೊಂದು ಮನೆಯ ಮೇಲೆ ಬಿದ್ದಿದ್ದು, ಮನೆಯವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮರ ಬಿದ್ದ ಪರಿಣಾಮ ಮನೆಯ ಮೇಲ್ಛಾವಣಿಯ ತಗಡು ಮುರಿದುಹೋಗಿದ್ದು, ಬೈಕ್ ಒಂದು ಸಂಪೂರ್ಣ ಹಾನಿಗೊಳಗಾಗಿದೆ. ನಿತ್ಯವೂ ಚಿಕ್ಕ ಮಕ್ಕಳು ಇದೇ ಮರದ ಕೆಳಗೆ ಆಟವಾಡುತ್ತಿದ್ದರು. ಶ್ರೀಧರ ಮಾಹದೇವಪ್ಪ ಉಪ್ಪಾರ ಎಂಬ 13 ವರ್ಷದ ಹುಡುಗನಿಗೆ ಚಿಕ್ಕಪುಟ್ಟ ಗಾಯಗಳಾಗಿದ್ದು, ಸ್ವಲ್ಪದರಲ್ಲೇ ಅನಾಹುತ ತಪ್ಪಿದೆ ಎಂದು ಸ್ಥಳದಲ್ಲಿದ್ದ ಸಾರ್ವಜನಿಕರು ತಿಳಿಸಿದ್ದಾರೆ.

ಸ್ಥಳಕ್ಕೆ ಗ್ರಾಮ ಆಡಳಿತ ಅಧಿಕಾರಿ ಯೋಗೇಶ ಕುರಹಟ್ಟಿ, ಬಡವಾಣೆಯ ಯುವ ಮುಖಂಡ ಬಸವರಡ್ಡಿ ಬಂಡಿಹಾಳ, ನಾಗಪ್ಪ ಜವಳತೋಟದ, ಶಿವು ಮಠದ, ಶರಣು ಬಂಡಿಹಾಳ, ಧರ್ಮಣ್ಣ ತಳವಾರ ಭೇಟಿ ನೀಡಿ ಪರಿಶೀಲಿಸಿದರು.

## ಹೊಸಬರಿಗೆ ಸಚಿವ ಸ್ಥಾನ ಕೊಡುವ ಬಗ್ಗೆ ಪಕ್ಷದಲ್ಲಿ ಚಿಂತನೆ ನಡೆದಿದೆ: ಸಲೀಂ ಅಹ್ಮದ್

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಹೊಸಬರಿಗೆ ಸಚಿವಸ್ಥಾನ ಕೊಡುವ ಬಗ್ಗೆ ಪಕ್ಷದಲ್ಲಿ ಚಿಂತನೆ ನಡೆದಿದೆ ಎಂದು ವಿಧಾನಪರಿಷತ್ ಸದಸ್ಯ ಸಲೀಂ ಅಹ್ಮದ್ ಸಂಪುಟ ಪುನಾರಚನೆ ಗುಟ್ಟು ಬಿಚ್ಚಿಟ್ಟಿದ್ದಾರೆ.

ಹಾವೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ವಿಧಾನಪರಿಷತ್ ಸದಸ್ಯ ಸಲೀಂ ಅಹ್ಮದ್, ಸಚಿವ ಸಂಪುಟ ಪುನಾರಚನೆ ಬಗ್ಗೆ ಹೈಕಮಾಂಡ್ ಮತ್ತು ಸಿಎಂ



ಸಿದ್ದರಾಮಯ್ಯ ಚಿಂತನೆ ನಡೆಸಿದ್ದಾರೆ. ಆದರೆ ಅಂತಿಮ ತೀರ್ಮಾನ ಹೈಕಮಾಂಡ್ ನಾಯಕರಿಗೆ ಬಿಟ್ಟಿದ್ದು ಎಂದು ಹೇಳಿದ್ದಾರೆ.

2023ರಲ್ಲಿ ಸರ್ಕಾರ ರಚನೆಯಾದಾಗಲೇ ನಾನು ಸಂಪುಟದಲ್ಲಿರಬೇಕಿತ್ತು.

ಆದರೆ ಕೊನೆ ಕ್ಷಣದಲ್ಲಿ ಪಟ್ಟಿಯಿಂದ ನನ್ನ ಹೆಸರು ಕೈಬಿಡಲಾಗಿತ್ತು. ಕಳೆದ 43 ವರ್ಷಗಳಿಂದ ರಾಜ್ಯದಲ್ಲಿ ಪಕ್ಷ ಸಂಘಟನೆ ಮಾಡಿದ್ದೇನೆ. ಸಂಪುಟ ಪುನಾರಚನೆ ವೇಳೆ ನನಗೆ ಅವಕಾಶ ಸಿಗುವ ವಿಶ್ವಾಸವಿದೆ ಎಂದಿದ್ದಾರೆ.

## ನಿಧನ

### ಭೀಮಪ್ಪ ಬಾಲಪ್ಪನವರ



**ಮುಳಗುಂದ:** ಪಟ್ಟಣ ಸಮಿಪದ ಕುರ್ತಕೋಟಿ ಗ್ರಾಮದ ಭೀಮಪ್ಪ ಬಾಲಪ್ಪನವರ (85) ಶುಕ್ರವಾರ ನಿಧನರಾಗಿದ್ದಾರೆ.

ಮೃತರು ಪತ್ನಿ ಮೂವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.



ಶನಿವಾರ ನಡೆದ ನಶಾ ಮುಕ್ತ ಕರ್ನಾಟಕ ಹಾಗೂ ಅಂಗಾಗ ದಾನ ಕುರಿತ ಜನಜಾಗೃತಿ ಕಾರ್ಯಕ್ರಮಕ್ಕೆ ಬೆಟಗೇರಿಗೆ ಆಗಮಿಸಿದ ಬೆಂಗಳೂರಿನ ಖ್ಯಾತ ವೈದ್ಯರು ಹಾಗೂ ರಾಜೀವ ಗಾಂಧಿ ಅರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸಿನೆಟ್ ಸದಸ್ಯರಾದ ಡಾ. ಓಬುಳಾರೆಡ್ಡಿಯವರಿಗೆ ಗಣೇಶಸಿಂಗ್ ಬ್ಯಾಳಿ ಹಾಗೂ ಅವರ ಪರಿವಾರದವರು ಪುಷ್ಪಗುಚ್ಛ ನೀಡಿ ಗೌರವಿಸಿ ಆತ್ಮೀಯವಾಗಿ ಬರಮಾಡಿಕೊಂಡರು.

### ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ; 7ನೇ ದಿನದತ್ತ ಅಹೋರಾತ್ರಿ ಧರಣಿ

# ಬಂಜಾರ ಸಮುದಾಯದಿಂದ 'ತಮಟೆ ಚಳುವಳಿ'

**■ವಿಜಯಸಾಕ್ಷಿ ಸುದ್ದಿ, ಗದಗ**

ಪರಿಶಿಷ್ಟ ಜಾತಿಗಳಲ್ಲಿನ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣದ ವಿರುದ್ಧವಾಗಿ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಜಿಲ್ಲಾ ಬಂಜಾರ ಸಮುದಾಯದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ, ನಗರದ ಗಾಂಧಿ ವೃತ್ತದಲ್ಲಿ ಹಮ್ಮಿಕೊಂಡಿರುವ ಬೃಹತ್ ಪ್ರತಿಭಟನೆ ಮತ್ತು ಅನಿರ್ದಿಷ್ಟಾವಧಿಯ ಅಹೋರಾತ್ರಿ ಧರಣಿ ಶನಿವಾರವೂ ಮುಂದುವರೆದಿದೆ.

ಈ ಹೋರಾಟದಲ್ಲಿ ಜಿಲ್ಲೆಯ ವಿವಿಧ ತಾಂಡಾಗಳ ಸಾವಿರಾರು ಜನರು ಭಾಗವಹಿಸಿ, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದರು. ಶನಿವಾರ ಗದಗ ಜಿಲ್ಲೆಯ 72 ತಾಂಡಾಗಳ ಪೈಕಿ ತಮ್ಮ ವೇಳಾಪಟ್ಟಿಯಂತೆ ಕಬಲಾಯತ್ ಕಟ್ಟಿ, ಹಮ್ಮಿಗಿ, ಮಜ್ಜೂರ, ಅಕ್ಕಿಗುಂದ, ಉಳ್ಳಟ್ಟಿ, ಬೆಣಸಮಟ್ಟಿ, ಗೌಡಗೇರಿ ತಾಂಡಾಗಳ ಬಂಜಾರರು ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಕಿತ್ತೂರು ರಾಣಿ ಚನ್ನಮ್ಮ ವೃತ್ತದಿಂದ ಸರ್ಕಾರದ ವಿರುದ್ಧ ತಮಟೆ ಚಳುವಳಿ ಮೂಲಕ ಮೆರವಣಿಗೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಅಹೋರಾತ್ರಿ ಧರಣಿಯಲ್ಲಿ ಭಾಗವಹಿಸಿದರು.

ಪ್ರತಿಭಟನಾಕಾರರು ತಮಟೆ, ನಗಾರಿ ಮುಂತಾದ ವಾದ್ಯಗಳನ್ನು ರಸ್ತೆಯುದ್ದಕ್ಕೂ ಬಾರಿಸುತ್ತಾ ಸರ್ಕಾರದ ಅವೈಜ್ಞಾನಿಕ ಒಳಮೀಸಲಾತಿ ನಿರ್ಧಾರವನ್ನು ಕೂಡಲೇ ಕೈಬಿಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕೆ.ಸಿ. ನಭಾಪುರ, ಎನ್.ಟಿ. ಪೂಜಾರ,



ಪರಮೇಶ ನಾಯಕ್, ಚಂದು ನಾಯಕ್, ಧನಸಿಂಗ್ ನಾಯಕ್, ಈಶ್ವರ್ ನಾಯಕ್, ಐ.ಎಸ್. ಪೂಜಾರ್, ಟಿ.ಡಿ. ಪೂಜಾರ್, ಮಜ್ಜುರ್ ತಾಂಡೆ ಆನಂದ ನಾಯಕ್, ಶಿವಪ್ಪ ಲಮಾಣಿ, ಚನ್ನಪ್ಪ ಕಾರಬಾರಿ, ವಸಂತ್ ಲಮಾಣಿ, ವೆಂಕಪ್ಪ ಲಮಾಣಿ, ಬಾಲು ಲಮಾಣಿ, ಕೃಷ್ಣ ಲಮಾಣಿ, ಭೀಮಪ್ಪ ಪೂಜಾರಿ, ರಾಜೇಶ್ ಲಮಾಣಿ, ಧನ್ನಪ್ಪ ಲಮಾಣಿ, ಸುರೇಶ ಲಮಾಣಿ, ಬಾಪೂಜಿ ಲಮಾಣಿ, ಕಬಲಾಯತ್ ಕಟ್ಟಿ, ನೂರಪ್ಪ ನಾಯಕ್, ರಾಮಪ್ಪ ದೊಡ್ಮನಿ, ಕೇಶಪ್ಪಾ ಲಮಾಣಿ, ಧರಮಪ್ಪ ಲಮಾಣಿ, ಥಾ-ಕುರ್ ಲಮಾಣಿ, ಅಕ್ಕಿಗುಂದ ತಾಂಡಾದ ವೆಂಕಪ್ಪ ಕಾರಬಾರಿ ಸಕ್ರಪ್ಪ ನಾಯಕ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

> ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣವನ್ನು ಸರ್ಕಾರ ಈ ಕೂಡಲೇ ತಡೆ ಹಿಡಿದು ನಮ್ಮ ಬಂಜಾರ ಸಮುದಾಯಕ್ಕೆ ನ್ಯಾಯ ದೊರಕಿಸಿಕೊಡಬೇಕು. ಸರ್ಕಾರದ ಬಂಜಾರ ವಿರೋಧಿ ನೀತಿಯನ್ನು ನಾವು ಬಲವಾಗಿ ಖಂಡಿಸುತ್ತೇವೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಈ ಹೋರಾಟದಲ್ಲಿ ಭಾಗವಹಿಸಲಿದ್ದಾರೆ.
>
> **-ರವಿಕಾಂತ್ ಅಂಗಡಿ,**
> ವಕೀಲರು ಹಾಗೂ ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ.

### ಇಂದು ಕಸೂತಿ ಚಳುವಳಿ

ಭಾನುವಾರದ ಪ್ರತಿಭಟನೆಯಲ್ಲಿ ಜಿಲ್ಲೆಯ 72 ತಾಂಡಾಗಳ ಪೈಕಿ ಮಹಾಲಿಂಗಪುರ, ಮುರುಡಿ, ಶಿಗ್ಲಿ, ದೊಡ್ಡೂರು ಕಾಲೋನಿ, ಕೊಡಗಾನೂರ, ಸರ್ಜಾಪುರ ತಾಂಡಾಗಳ ಬಂಜಾರ ಸಮುದಾಯದ ಜನರು 'ಕಸೂತಿ ಚಳುವಳಿ'ಯಲ್ಲಿ ಭಾಗವಹಿಸುವ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಅಹೋರಾತ್ರಿ ಧರಣಿಯಲ್ಲಿ ಭಾಗವಹಿಸಲಿದ್ದಾರೆ.

## ಬೀದಿಬದಿ ವ್ಯಾಪಾರಿಯ ಮಗಳಿಗೆ ಚಿನ್ನದ ಪದಕ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಸಮೀಪದ ಜಕ್ಕಲಿ ಗ್ರಾಮದ ಪ್ರೇಮಾ ಶರಣಪ್ಪ ಮುಕ್ಕಣ್ಣವರ ಸಾಧನೆಗೆ ಬಡತನ ಅಡ್ಡಿಯಾಗುವುದಿಲ್ಲ ಎಂಬುದನ್ನು ತಮ್ಮ ಸಾಧನೆಯಿಂದ ತೋರಿಸಿಕೊಟ್ಟಿದ್ದಾರೆ.

ಮುಲತಃ ರೋಣ ತಾಲೂಕಿನ ಜಕ್ಕಲಿ ಗ್ರಾಮದವರಾದ ಪ್ರೇಮಾ ಅವರ ತಂದೆ ಶರಣಪ್ಪ ಮುದಿಯಪ್ಪ ಮುಕ್ಕಣ್ಣವರ ಹಾಗೂ ತಾಯಿ ಸಾವಿತ್ರಿ ಉದ್ಯೋಗ ಅರಸಿ ಬೆಂಗಳೂರಿಗೆ ವಲಸೆ ಬಂದಿದ್ದಾರೆ. ಪೀಣ್ಯ 2ನೇ ಹಂತದ ರಾಜಗೋಪಾಲ್ ನಗರದಲ್ಲಿ ನೆಲೆಸಿದ್ದು, ತಂದೆ ಜಾಲಹಳ್ಳಿ ಕ್ರಾಸ್‌ನಲ್ಲಿ ಬೀದಿಬದಿ ವಾಚ್ ಮಾರಾಟ ಮಾಡುತ್ತಾರೆ. ತಾಯಿ ಚಪಾತಿಗಳನ್ನು ಮಾಡಿ ಹೋಟೆಲ್‌ಗಳಿಗೆ ಪೂರೈಸುತ್ತಾರೆ.

ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗದಲ್ಲಿ ಬೀದಿಬದಿ ವ್ಯಾಪಾರಿಯ ಮಗಳು 11 ಚಿನ್ನದ ಪದಕ ಪಡೆದು ಸಾಧನೆ ಮಾಡಿದ್ದಾರೆ. ಈ ಮೂಲಕ ಓದಿಗೆ ಬಡತನ ಅಡ್ಡಿಯಾಗದು ಎಂಬುದನ್ನು ಸಾಬೀತುಪಡಿಸಿದ್ದಾರೆ. ಇತ್ತೀಚೆಗೆ ನಡೆದ ಘಟಿಕೋತ್ಸವದಲ್ಲಿ ಪದವಿ ಮತ್ತು ಚಿನ್ನದ ಪದಕಗಳನ್ನು ಪ್ರದಾನ ಮಾಡಲಾಗಿದೆ.

ವಿವಿಯ ಕನ್ನಡ ಅಧ್ಯಯನ ಕೇಂದ್ರದಲ್ಲಿ ಕನ್ನಡ ವಿಷಯದಲ್ಲಿ ವ್ಯಾಸಂಗ ಮಾಡಿರುವ ಎಸ್. ಪ್ರೇಮಾ 11 ಚಿನ್ನದ ಪದಕದ ಸಾಧನೆಗೆ ಪಾತ್ರರಾದವರು. ತಂದೆಯ ಮಾತಿನಂತೆ ಶಿಕ್ಷಕಿಯಾಗಬೇಕೆಂಬ ಹಂಬಲದಿಂದ ಕಷ್ಟಪಟ್ಟು ಓದಿದ್ದರಿಂದ ಹೆಚ್ಚು ಚಿನ್ನದ ಪದಕಗಳನ್ನು ಪಡೆಯಲು ಸಾಧ್ಯವಾಯಿತು ಎನ್ನುತ್ತಾರೆ ಪ್ರೇಮಾ. ಪ್ರಸ್ತುತ ರಾಜಾಜಿನಗರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬಿ.ಇಡಿ ಪದವಿ ವ್ಯಾಸಂಗ ಮಾಡುತ್ತಿದ್ದು, ಮುಂದಿನ ದಿನಗಳಲ್ಲಿ ಸಹಾಯಕ ಪ್ರಾಧ್ಯಾಪಕಿಯಾಗುವ ಮತ್ತು ಕನ್ನಡ ಸಾಹಿತ್ಯದಲ್ಲಿಯೇ ಸಾಧನೆ ಮಾಡುವ ಗುರಿ ಹೊಂದಿದ್ದಾರೆ.

## ಶಾಲೆಯ ಸುತ್ತ ಸ್ವಚ್ಛತೆ ಕಾಪಾಡಲು ಆಗ್ರಹ


**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಕೋಡಿಕೊಪ್ಪದಲ್ಲಿ ಪಿಎಸ್‌ಎಸ್ ಆಂಗ್ಲ ಮಾಧ್ಯಮ ಶಾಲೆಗೆ ಹೋಗುವ ರಸ್ತೆ ತುಂಬಾ ಗಲೀಜಾಗಿದ್ದು, ಅದನ್ನು ಸ್ವಚ್ಛಗೊಳಿಸಿ, ಗಟಾರಗಳನ್ನು ತೆರೆಯುವಂತೆ ಪಟ್ಟಣ ಪಂಚಾಯಿತಿಗೆ ಸಂಸ್ಥೆಯ ಅಧ್ಯಕ್ಷ ಡಾ. ಕೆ.ಬಿ. ಧನ್ನೂರ ಆಗ್ರಹಿಸಿದ್ದಾರೆ.

ರಸ್ತೆಯ ಎಡಬಲಗಳಲ್ಲಿ ಬಹಳಷ್ಟು ಗಲೀಜು ಇದ್ದು, ಕನಿಷ್ಠ ವಾರಕ್ಕೊಮ್ಮೆಯಾದರೂ ಪಟ್ಟಣ ಪಂಚಾಯಿತಿಯವರು ಈ ರಸ್ತೆಯನ್ನು ಸ್ವಚ್ಛಗೊಳಿಸಬೇಕು. ಇಲ್ಲವಾದರೆ ಇದು ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ.

ಮುಖ್ಯ ರಸ್ತೆಯಿಂದ ಶಾಲೆಗೆ ಸಂಪರ್ಕಿಸುವ ರಸ್ತೆಯು ಕಿರಿದಾಗಿದ್ದು, ಅಲ್ಲಿರುವ ಗುಂಡಿಯನ್ನು ಮುಚ್ಚುವ ಕಾರ್ಯ ಮಾಡಬೇಕೆಂದೂ ಅವರು ಆಗ್ರಹಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿದ ನರೇಗಲ್ಲ ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಈ ಹಿಂದೆ ಈ ರಸ್ತೆಯನ್ನು ಸ್ವಚ್ಛಗೊಳಿಸಲಾಗಿದೆ. ಗಟಾರವನ್ನೂ ಸಹ ತೆರೆಯಲಾಗಿತ್ತು. ಆದರೆ ನಮ್ಮೊಂದಿಗೆ ಶಾಲೆಯ ಸಿಬ್ಬಂದಿಯವರೂ ಕೈಜೋಡಿಸಿದರೆ ಮಾತ್ರ ಅಲ್ಲಿ ಸ್ವಚ್ಛತೆಯನ್ನು ಕಾಯ್ದುಕೊಳ್ಳಲು ಸಾಧ್ಯವಾಗುತ್ತದೆ. ಶಾಲೆಯ ಕಸವನ್ನು ನೇರವಾಗಿ ಗಟಾರಕ್ಕೆ ಎಸೆಯುವುದನ್ನು ಸಿಬ್ಬಂದಿಯವರು ಬಿಡಬೇಕು. ರಸ್ತೆಯ ಮೇಲಿನ ಗುಂಡಿಯನ್ನು ಮುಚ್ಚಲು ಕ್ರಮ ವಹಿಸಲು ಮುಖ್ಯಾಧಿಕಾರಿಗೆ ಸೂಚಿಸುತ್ತೇನೆ ಎಂದರು.



## ಮಹಿಳೆಯರು ಶೈಕ್ಷಣಿಕವಾಗಿ ಮುಂದೆ ಬನ್ನಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಆರ್ಥಿಕ ಸದೃಢತೆ ಮಹಿಳೆಯರಲ್ಲಿ ಆತ್ಮವಿಶ್ವಾಸ ಹೆಚ್ಚಿಸುತ್ತದೆ. ಸ್ತ್ರೀ ಗುಂಪುಗಳ ಮೂಲಕ ಮಹಿಳೆಯರ ಸಬಲೀಕರಣದ ಧ್ಯೇಯದೊಂದಿಗೆ ಕಾರ್ಯೋನ್ಮುಖರಾಗಬೇಕು. ಮಹಿಳೆಯರು ಆರ್ಥಿಕ ಅಭಿವೃದ್ಧಿಯೊಂದಿಗೆ ಆರ್ಥಿಕ ಸಮಾನತೆ ಹಾಗೂ ಸಾಮಾಜಿಕ ನ್ಯಾಯದೊಂದಿಗೆ ಸ್ತ್ರೀಯರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಕಾರ್ಯ ನಡೆಯಬೇಕಾಗಿದೆ ಎಂದು ಚಿಂತಕಿ ಕವಿತಾ ದಂಡಿನ ಹೇಳಿದರು. ಅವರು ಗದುಗಿನ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಗದುಗಿನ ಪಂಚಾಕ್ಷರಿ ನಗರದ ನಾಗಪ್ಪನ ಕಟ್ಟಿಯ ಪ್ರಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಹಿಳೆ ಮತ್ತು ಶಿಕ್ಷಣ ಕುರಿತು ಮಾತನಾಡಿದರು.

ಶೈಕ್ಷಣಿಕವಾಗಿ ಮಹಿಳೆಯರು ಮುಂದೆ ಬರಬೇಕು. ಅಕ್ಷರ ಕಲಿತ ನಾರಿ ಮನೆಗೆಲ್ಲ ದಾರಿ. ತಾನು ಕಲಿತು ಕುಟುಂಬವನ್ನೇ ಅಕ್ಷರಸ್ಥರನ್ನಾಗಿಸುವ ಮಾಡುವ ಕೆಲಸ ನಡೆಯಬೇಕು. ಮಕ್ಕಳನ್ನು ಮೊಬೈಲ್ ಹಾಗೂ ಟಿವಿಯಿಂದ ದೂರವಿರಿಸಿ ಪುಸ್ತಕ ಓದುವ ಸಂಸ್ಕೃತಿ ಬೆಳೆಸಬೇಕು ಎಂದರು.

ಲಕ್ಷ್ಮೀ ಅಂಗಡಿ ಪ್ರಾರ್ಥಿಸಿದರು. ಲಕ್ಷ್ಮೀ ಅರಮನಿ ಸ್ವಾಗತಿಸಿದರು. ಹೇಮಾ ಹೆಬಸೂರ ನಿರೂಪಿಸಿದರು. ಒಕ್ಕೂಟದ ಅಧ್ಯಕ್ಷೆ ಪ್ರೇಮಾ ಕಡೆಮನಿ ವಂದಿಸಿದರು. ವಿಜಯಲಕ್ಷ್ಮೀ ಹೂಗಾರ, ಶಕುಂತಲಾ ಖಾನಪ್ಪಗೌಡ್ರ, ಬಸಮ್ಮ ಅಂಗಡಿ, ಲಲಿತಾ ಹಿರೇಮಠ, ಗಂಗಮ್ಮ ಗೋಧಿ, ಅನುಪಮಾ ಕೋಳಿವಾಡ, ರೇಣುಕಾ ಬೆಳವಟಗಿ, ಸುರೇಖಾ ಹಡಗಲಿ, ಲೀಲಾವತಿ ಕಿರೇಸೂರ, ಗಂಗಮ್ಮ ನರ್ತಿ, ಶೈಲಜಾ ಕೌತಾಳ, ನಿರ್ಮಲಾ ವಡ್ಡಟ್ಟಿ, ವಿಜಯಾ ಪೂಜಾರ, ಅಂಬಿಕಾ ಪುಲಾರೆ, ಗಾಯತ್ರಿ ಗದುಗಿನಮಠ ಮುಂತಾದವರು ಉಪಸ್ಥಿತರಿದ್ದರು.

## ಭಾಗ್ಯಾ ಬೊಮ್ಮಸಾಗರರಿಗೆ ಪ್ರಶಸ್ತಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಕಪ್ಪೋತ್ತಗಿರಿ ಸಾಹಿತ್ಯ ವೇದಿಕೆಯು ಪ್ರತೀ ವರ್ಷ ಕೊಡಮಾಡುವ ಆದರ್ಶ ಶಿಕ್ಷಕ ಪ್ರಶಸ್ತಿಯನ್ನು 2025-2026ನೇ ಸಾಲಿನಲ್ಲಿ ಎಸ್.ಎಸ್.ಕೆ. ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ವಿಜ್ಞಾನ ಶಿಕ್ಷಕಿ ಭಾಗ್ಯಾ ಬೊಮ್ಮಸಾಗರ ಅವರಿಗೆ ಕೊಡಮಾಡಿದ್ದಾರೆ.

ಶ್ರೀ ವಿದ್ಯಾದಾನ ಸಮಿತಿಯ ಸಭಾಂಗಣದಲ್ಲಿ ಕಪ್ಪೋತ್ತಗಿರಿ ಸಾಹಿತ್ಯ ವೇದಿಕೆಯ ಸಂಸ್ಥಾಪಕಿಯಾದ ಚಂದ್ರಕಲಾ ಇಟಗಿಮಠ ಅವರ ಅಧ್ಯಕ್ಷತೆಯಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಎಸ್.ಎಸ್.ಕೆ. ವಿದ್ಯಾಸಂಸ್ಥೆಯ ಚೇರ್‌ಮನ್ ಗೋವಿಂದರಾಜ ಬಸವಾ, ವೈಸ್ ಚೇರ್‌ಮನ್ ದತ್ತು ಪವಾರ, ಸಂಸ್ಥೆಯ ಅಧ್ಯಕ್ಷ ಲೋಕನಾಥ ಕಬಾಡಿಯವರು ಪ್ರಶಸ್ತಿ ವಿಜೇತ ಶಿಕ್ಷಕಿಯನ್ನು ಅಭಿನಂದಿಸಿ ಶುಭಕೋರಿದರು.

## ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡರ ಆರೋಗ್ಯ ವಿಚಾರಿಸಿದ ಯಡಿಯೂರಪ್ಪ, ವಿಜಯೇಂದ್ರ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಆಸ್ಪತ್ರೆಗೆ ದಾಖಲಾಗಿರುವ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಆರೋಗ್ಯವನ್ನು ಶನಿವಾರ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ವಿಚಾರಿಸಿದರು.

ನಗರದ ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿದ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ, ಪುತ್ರ ಬಿ.ವೈ ವಿಜಯೇಂದ್ರ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ ಅವರ ಆರೋಗ್ಯ ವಿಚಾರಿಸಿದರು. ಜೊತೆಗೆ ದೇಶದ ಮತ್ತು ರೈತರ ಹಿತಕ್ಕಾಗಿ ಸದಾ ಶ್ರಮಿಸಿದ ಈ ಮಹಾನ್ ನಾಯಕರು ಶೀಘ್ರ ಚೇತರಿಸಿಕೊಂಡು ಉತ್ತಮ ಆರೋಗ್ಯದಲ್ಲಿ ಇರಲಿ ಎಂದು ಹಾರೈಸಿದರು.

ಇನ್ನೂ ಇತ್ತೀಚೆಗೆ ಅನಾರೋಗ್ಯದಿಂದ ಬೆಂಗಳೂರಿನ ಮಣಿಪಾಲ ಆಸ್ಪತ್ರೆಗೆ ದಾಖಲಾಗಿರುವ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರ ಆರೋಗ್ಯ ಸ್ಥಿರವಾಗಿರುವುದಾಗಿ ಎಂದು ಜೆಡಿಎಸ್ ಪಕ್ಷ ಒಂದು ದಿನದ ಹಿಂದೆ ತಿಳಿಸಿದೆ.



## ಜಿಬಿಎ ಸಭೆಗೆ ಗೈರಾದ ಬಿಜೆಪಿಯವರು ಬೆಂಗಳೂರ ಅಭಿವೃದ್ಧಿಯ ವಿರೋಧಿಗಳು

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸಭೆಗೆ ಹಾಜರಾಗಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಬಹುದಾಗಿದ್ದರೂ, ಸಭೆಗೆ ಗೈರಾಗುವ ಮೂಲಕ ಬಿಜೆಪಿಯವರು ಬೆಂಗಳೂರಿನ ಅಭಿವೃದ್ಧಿಯ ವಿರೋಧಿಗಳೆಂದು ನಿರೂಪಿಸಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶನಿವಾರ ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.



ಜಿಬಿಎ ಸಭೆಗೆ ಬಿಜೆಪಿಯವರು ಗೈರಾಗಿದ್ದ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸುತ್ತಾ, ಬಿಜೆಪಿಗರಿಗೆ ಬೆಂಗಳೂರಿನ ಬಗ್ಗೆ ಕಳಕಳಿಯಿದ್ದರೆ ಜಿಬಿಎ ಸಭೆಗೆ ಗೈರಾಗುತ್ತಿರಲಿಲ್ಲ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಎಂಬುದು ಪ್ರಜಾಪ್ರಭುತ್ವದ ವೇದಿಕೆಯಾಗಿದೆ. ಆಡಳಿತ ವಿಕೇಂದ್ರೀಕರಣಕ್ಕೆ ಬಿಜೆಪಿ ವಿರೋಧ ವ್ಯಕ್ತಪಡಿಸುತ್ತಾರೆ ಎಂದು ತಿಳಿಯುತ್ತದೆ. ಬೆಂಗಳೂರು ಬೃಹತ್ ಆಗಿ ಬೆಳೆದಿದ್ದು, ಇಲ್ಲಿನ ಜನರಿಗೆ ಉತ್ತಮ ಆಡಳಿತ, ಸೌಲಭ್ಯಗಳನ್ನು ನೀಡಲು ನಗರವನ್ನು ವಿಭಜಿಸಲೇಬೇಕೆಂಬ ನಿಲುವನ್ನು ಪ್ರಥಮವಾಗಿ ಬಿಜೆಪಿಯವರೇ ಹೊಂದಿದ್ದರು . ಆದರೆ ಈಗ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಬಿಜೆಪಿಯವರು ಪುನ: ಅಧಿಕಾರಕ್ಕೆ ಬರುವ ಪ್ರಶ್ನೆಯೇ ಇಲ್ಲ ಎಂದು ತಿಳಿಸಿದರು.

## ಹೃದಯ ವಿದ್ರಾವಕ ಘಟನೆ; ತಂದೆ ಸಾವಿನಿಂದ ಮನನೊಂದು ಮಗಳೂ ಸೂಸೈಡ್!



**■ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ**

ಚಿಕ್ಕಬಳ್ಳಾಪುರದಲ್ಲಿ ಮನಕಲಕುವ ಘಟನೆಯೊಂದು ಜರುಗಿದ್ದು, ತಂದೆ-ಯ ಸಾವಿನಿಂದ ಮನನೊಂದ ಮಗಳು ತಾನೂ ಆತ್ಮಹತ್ಯೆ ಮಾಡಿಕೊಂಡಿರುವ ಮನಕಲಕುವ ಘಟನೆ ಜರುಗಿದೆ.

22 ವರ್ಷದ ಸ್ವರ್ಣ ಮೃತ ಮಗಳು. ಬೆಂಗಳೂರಿನ ಮಹಾರಾಣಿ ಕಾಲೇಜಿನಲ್ಲಿ ಎಂಎಸ್ಸಿ ಪದವಿ ವ್ಯಾಸಂಗ ಮಾಡುತಿದ್ದ ಸ್ವರ್ಣ ಕಾಲೇಜಿನ ಹಾಸ್ಟೆಲ್‌ನಲ್ಲಿ ಇಲಿ ಪಾಷಾಣ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಳು. ಮನೆಗೆ ಬಂದಿದ್ದ ಮಗಳನ್ನ ತಾಯಿ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿದ್ದಳು. ಆದ್ರೆ ಚಿಕಿತ್ಸೆ ಫಲಕಾರಿಯಾಗದೇ ಮಗಳು ಸ್ವರ್ಣ ಸಾವನ್ನಪ್ಪಿದ್ದಾಳೆ. ಈಕೆ ತಂದೆ ಕಳೆದ 3 ತಿಂಗಳ ಹಿಂದೆ ಆತ್ಮಹತ್ಯೆ ಮಾಡಿಕೊಂಡು ಸಾವನ್ನಪ್ಪಿದ್ದರು. ಅಂದಿನಿಂದಲೂ ಮಾನಸಿಕವಾಗಿ ಕುಗ್ಗಿ ಹೋಗಿ ಕಿನ್ನತೆಗೆ ಒಳಗಾಗಿದ್ದ ಸ್ವರ್ಣ ಸೂಸೈಡ್ ಮಾಡಿಕೊಂಡು ಈಗ ತಂದೆಯ ಹಾದಿ ಹಿಡಿದಿದ್ದಾಳೆ.

ಇನ್ನೂ ಒಂದುಕಡೆ ಗಂಡ ಮತ್ತೊಂದು ಕಡೆ ಮಗಳು ಆತ್ಮಹತ್ಯೆ ಹಾದಿ ಹಿಡಿದಿದ್ದು ಇರೋ ಮಗನೊಂದಿಗೆ ತಾಯಿಗೆ ದಿಕ್ಕು ತೋಚದಂತಾಗಿದೆ. ಅಕ್ಕನ ಸಾವಿನಿಂದ ತಮ್ಮ ಸಹ ಕುಗ್ಗಿ ಹೋಗಿದ್ದು ತಾಯಿಗೆ ಆತಂಕ ಮೂಡಿಸಿದೆ.

## ಇಸ್ರೇಲ್-ಹಮಾಸ್ ಕದನ ವಿರಾಮ: ಗಾಝಾಗೆ ಮರಳುತ್ತಿರುವ ಸಾವಿರಾರು ಪ್ಯಾಲೆಸ್ತೀನಿಯರು

**■ವಿಜಯಸಾಕ್ಷಿ ಸುದ್ದಿ, ಇಸ್ರೇಲ್**

ಹಮಾಸ್ ಜೊತೆಗಿನ ಶಾಂತಿ ಒಪ್ಪಂದದ ಮೊದಲ ಹಂತ ಜಾರಿಗೊಳಿಸುತ್ತಿರುವ ಇಸ್ರೇಲಿ ಸೇನೆ, ಗಾಝಾ ಮೇಲಿನ ತನ್ನ ದಾಳಿಯನ್ನು ನಿಲ್ಲಿಸಿದ್ದು, ಗಾಝಾ ಪಟ್ಟಿ ಪ್ರದೇಶದಿಂದ ಭಾಗಶಃ ಹಿಂದೆ ಸರಿದಿದೆ. ಈ ಹಿನ್ನೆಲೆ, ಬಲವಂತವಾಗಿ ಸ್ಥಳಾಂತರಿಸಲ್ಪಟ್ಟ ಸಾವಿರಾರು ಪ್ಯಾಲೆಸ್ತೀನಿಯರು ಉತ್ತರ ಗಾಝಾದ ಧ್ವಂಸಗೊಂಡ ಪಟ್ಟಣಗಳು ಮತ್ತು ನಗರಗಳಿಗೆ ಮರಳುತ್ತಿದ್ದಾರೆ ಎಂದು ಸುದ್ದಿ ಸಂಸ್ಥೆ ಅಲ್-ಜಝೀರಾ ವರದಿ ಮಾಡಿದೆ.



ಹಮಾಸ್ ಒತ್ತೆಯಾಳುಗಳಾಗಿ ಇಟ್ಟುಕೊಂಡಿರುವ ಇಸ್ರೇಲ್ ಪ್ರಜೆಗಳ ಬಿಡುಗಡೆ ಕಾರ್ಯ ಸೋಮವಾರ (ಅ.13) ನಡೆಯಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಹಮಾಸ್, ಪ್ಯಾಲೆಸ್ಟಿನೀಯನ್ ಇಸ್ಲಾಮಿಕ್ ಜಿಹಾದ್ ಮತ್ತು ಪಾಪ್ಯುಲರ್ ಫ್ರಂಟ್ ಫಾರ್ ದಿ ಲಿಬರೇಷನ್ ಆಫ್ ಪ್ಯಾಲೆಸ್ಟೈನ್ (ಪಿಎಫ್‌ಎಲ್‌ಎಫ್) ಸಂಘಟನೆಗಳು ಗಾಝಾ ಪಟ್ಟಿಯ ಮೇಲೆ 'ಯಾವುದೇ ವಿದೇಶಿ ಆಡಳಿತ'ವನ್ನು ತಿರಸ್ಕರಿಸುವುದಾಗಿ ಹೇಳಿವೆ.

ಇದೇ ವೇಳೆ, ಗಾಜಾ ಅಧಿಕಾರಿಗಳು ಇಸ್ರೇಲ್ ಗಾಝಾದ ಮೇಲೆ ಆಕ್ರಮಣ ಮಾಡಿದ ಸಂದರ್ಭದಲ್ಲಿ ನಡೆದ ಯುದ್ಧಾಪರಾಧಗಳು ಮತ್ತು ಜನಾಂಗೀಯ ಹತ್ಯಾಕಾಂಡದ ಬಗ್ಗೆ ಸ್ವತಂತ್ರವಾದ, ಅಂತಾರಾಷ್ಟ್ರೀಯ ತನಿಖೆಗೆ ಒತ್ತಾಯಿಸಿದ್ದಾರೆ.

ಗಾಝಾದ ಎಲ್ಲಾ ಗಡಿಗಳನ್ನು ತೆರೆಯುವಂತೆ ಪ್ಯಾಲೆಸ್ತೀನ್ ನಿರಾಶ್ರಿತರ ಪರ ಕೆಲಸ ಮಾಡುವ ವಿಶ್ವಸಂಸ್ಥೆಯ ಸಂಸ್ಥೆ ಯುನೈಟೆಡ್ ನೇಷನ್ಸ್ ರಿಲೀಫ್ ಅಂಡ್ ವರ್ಕ್ ಏಜೆನ್ಸಿ ಫಾರ್ ಪ್ಯಾಲೆಸ್ಟೈನ್ ರೆಫ್ಯೂಜಿ ಇನ್ ದ ನಿಯರ್ ಈಸ್ಟ್ (ಯುನ್‌ಆರ್‌ಡಬ್ಲ್ಯುಎ) ಒತ್ತಾಯಿಸಿದೆ. ಗಡಿ ತೆರೆದ ಗಂಟೆಗಳಲ್ಲಿ ಗಾಝಾ ತಲುಪಲು 6,000 ನೆರವು ಟ್ರಕ್‌ಗಳು ಸಿದ್ಧವಾಗಿವೆ ಎಂದು ಅದು ಹೇಳಿದೆ.

ಇಸ್ರೇಲ್ ದಾಳಿಯಲ್ಲಿ ಸಾವನ್ನಪ್ಪಿದ ಸುಮಾರು 135 ಪ್ಯಾಲೆಸ್ತೀನಿಯರ ಶವಗಳನ್ನು ಶುಕ್ರವಾರ ಗಾಝಾದ ವಿವಿಧ ಆಸ್ಪತ್ರೆಗಳಿಗೆ ತರಲಾಗಿದೆ ಎಂದು ವಫಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಇಸ್ರೇಲ್ ಬಾಂಬ್ ದಾಳಿಯನ್ನು ನಿಲ್ಲಿಸಿರುವ ಸಂದರ್ಭವನ್ನು ಬಳಸಿಕೊಂಡು ರಕ್ಷಣಾ ತಂಡಗಳು ನಾಶವಾದ ಕಟ್ಟಡಗಳನ್ನು ತಲುಪುತ್ತಿವೆ.

ಶುಕ್ರವಾರ ಇಸ್ರೇಲಿ ವಾಯುದಾಳಿಯಲ್ಲಿ 19 ಜನರು ಸಾವನ್ನಪ್ಪಿದ್ದಾರೆ ಮತ್ತು ಒಬ್ಬರು ಈ ಹಿಂದೆ ಉಂಟಾದ ಗಾಯದಿಂದ ಸಾವನ್ನಪ್ಪಿದ್ದಾರೆ ಎಂದು ಗಾಝಾದ ವೈದ್ಯಕೀಯ ಮೂಲಗಳನ್ನು ಉಲ್ಲೇಖಿಸಿ ವಫಾ ವರದಿ ಮಾಡಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka